**ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿಯಮಿತ**
**ಮಾಚೇನಹಳ್ಳಿ ನಿದಿಗೆ ಅಂಚೆ ಶಿವಮೊಗ್ಗ – 577 222. ದೂರವಾಣಿ : 246344**

ಐ.ಎಫ್.ಟಿ. ಸಂಖ್ಯೆ/ಶಿ.ದಾ.ಚಿ.ಸಹಾಒ/ಮಾರುಕಟ್ಟೆ/ಟೆಂಡರ್/8155/2020–21 **ದಿನಾಂಕ: 22.02.2021**

## –: ಒಕ್ಕೂಟದ ಸ್ವಂತ ಮಿಲ್ಕ್ ಪಾರ್ಲರ್ ಟೆಂಡರ್ ಪ್ರಕಟಣೆ :–

ಅ) ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಒಕ್ಕೂಟದ ವ್ಯಾಪ್ತಿಯಲ್ಲಿ ಬರುವ ಈ ಕೆಳಕಂಡ ನಂದಿನಿ ಮಿಲ್ಕ್ ಪಾರ್ಲರ್‌ಗಳಲ್ಲಿ ಹಾಲು ಮತ್ತು ಹಾಲಿನ ಉತ್ಪನ್ನಗಳನ್ನು ಮಾರ್ಜಿನ್ ಆಧಾರದ ಮೇಲೆ ಮಾರಾಟ ಮಾಡಿ ಒಕ್ಕೂಟಕ್ಕೆ ಮಾಸಿಕ ಲೈಸೆನ್ಸಿ ಫೀಯನ್ನು ಮತ್ತು ಶೇ.18 ರಷ್ಟು ಜಿ.ಎಸ್.ಟಿ ತೆರಿಗೆಯನ್ನು ಪಾವತಿಸಿ ಪಾರ್ಲರ್ ನಿರ್ವಹಣೆ ಮಾಡಲು ಇ–ಪ್ರೋಕ್ಯೂರ್‌ಮೆಂಟ್ ಪೋರ್ಟಲ್ ಮೂಲಕ (ಟೆಕ್ನಿಕಲ್ / ಕಮರ್ಷಿಯಲ್) ದರ ಹೊಂದಿದ ಎರಡು ಪ್ರತ್ಯೇಕ ಟೆಂಡರ್ ಕರೆಯಲಾಗಿದ್ದು ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಆ) ಮೇಲ್ಕಂಡ ಎಲ್ಲಾ ಮಿಲ್ಕ್ ಪಾರ್ಲರ್‌ಗಳ ಅವಧಿ ಎರಡು ವರ್ಷದ್ದಾಗಿರುತ್ತದೆ

**ನಿಬಂಧನೆಗಳು :**

1. ಟೆಕ್ನಿಕಲ್/ಕಮರ್ಷಿಯಲ್ ಟೆಂಡರ್‌ನ್ನು ಕರ್ನಾಟಕ ಸರ್ಕಾರದ ಇ–ಪ್ರೋಕ್ಯೂರ್‌ಮೆಂಟ್ ಪೋರ್ಟಲ್‌ನಡಿ ಸಲ್ಲಿಸುವುದು.
2. ಸಲ್ಲಿಸಲ್ಪಟ್ಟ ಟೆಂಡರ್‌ಗಳಲ್ಲಿ ಟೆಕ್ನಿಕಲ್ ಟೆಂಡರ್‌ನ್ನು ದಿ: 26.03.2021 ರಂದು ಬೆಳಿಗ್ಗೆ 11.30 ಘಂಟೆಗೆ ತೆರೆಯಲಾಗುವುದು.
3. ಪ್ರತಿ ಪಾರ್ಲರ್‌ಗೆ ಪ್ರತ್ಯೇಕ ಟೆಂಡರ್ ಮತ್ತು ಇ.ಎಂ.ಡಿ. ಸಲ್ಲಿಸುವುದು.
4. ಪ್ರತಿ ಪಾರ್ಲರ್‌ಗೆ ನೀಡಬೇಕಾದ ಇ.ಎಂ.ಡಿ / ಭದ್ರತಾ ಠೇವಣಿ ಮತ್ತು / ಪಾರ್ಲರ್‌ಗಳ ವಿವರ ಮತ್ತು ಇತರೆ ನಿಬಂಧನೆಗಳ ವಿವರವಾದ ಷೆಡ್ಯೂಲ್‌ನ್ನು ಹಾಗೂ ಟೆಂಡರ್ ಪ್ರಕಟಣೆಗೆ ಸಂಬಂಧಿಸಿದಂತೆ ವಿವರವಾದ ಮಾಹಿತಿಯು ಟೆಂಡರ್ ಫಾರಂನಲ್ಲಿ ಲಭ್ಯವಿರುತ್ತದೆ. ಹೆಚ್ಚಿನ ಮಾಹಿತಿಯನ್ನು ಶಿವಮೊಗ್ಗ ಹಾಲು ಒಕ್ಕೂಟದ ಕಛೇರಿ ವೇಳೆಯಲ್ಲಿ/ ಮಾರುಕಟ್ಟೆ ವಿಭಾಗದಿಂದ ಪಡೆಯಬಹುದು. **ದೂರವಾಣಿ : (08182) 246344**

ಸಹಿ/–
ವ್ಯವಸ್ಥಾಪಕ ನಿರ್ದೇಶಕರು
ಶಿವಮೊಗ್ಗ,ದಾವಣಗೆರೆ ಮತ್ತು ಚಿತ್ರದುರ್ಗ
ಜಿಲ್ಲಾ ಸಹಕಾರ ಹಾಲು ಒಕ್ಕೂಟ
ಶಿವಮೊಗ್ಗ.

ದಿನಾಂಕ : **22.02.2021**
ಸ್ಥಳ : ಶಿವಮೊಗ್ಗ ಡೈರಿ

# **ತಾಂತ್ರಿಕ ಮತ್ತು ವಾಣಿಜ್ಯ ಟೆಂಡರ್ ಅರ್ಜಿ**

**ಇವರಿಗೆ :**

**ವ್ಯವಸ್ಥಾಪಕ ನಿರ್ದೇಶಕರು**
**ಶಿವಮೊಗ್ಗ,ದಾವಣಗೆರೆ ಮತ್ತು ಚಿತ್ರದುರ್ಗ**
**ಹಾಲು ಒಕ್ಕೂಟ**
**ಮಾಚೇನಹಳ್ಳಿ ನಿದಿಗೆ ಅಂಚೆ**
**ಶಿವಮೊಗ್ಗ – 577 222.**

**ಇಂದ**

**ಹೆಸರು : ................................**
**ತಂದೆಯ ಹೆಸರು :....................**
**ವಿಳಾಸ: ಮನೆ ನಂ .................**
**ರಸ್ತೆ ಹೆಸರು ............................**
**ಹಳ್ಳಿ ............................**
**ತಾಲ್ಲೂಕು/ ಜಿಲ್ಲೆ .....................**
**ಪಿನ್ ಕೋಡ್ :........................**
**ಮೊಬೈಲ್ ನಂ :**

ಸ್ವಾಮಿ,

**ವಿಷಯ :** ತಾಂತ್ರಿಕ ಮತ್ತು ವಾಣಿಜ್ಯ ಟೆಂಡರ್‌ನ ದ್ವೈವಾರ್ಷಿಕ ಮಿಲ್ಕ್ ಪಾರ್ಲರ್ ಲೈಸೆನ್ಸಿ ಪಡೆಯುವ ಸಲುವಾಗಿ.

ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಒಕ್ಕೂಟದ ಮಿಲ್ಕ್ ಪಾರ್ಲರ್ ನಿರ್ವಹಣೆ ಬಗ್ಗೆ ತಾಂತ್ರಿಕ ಮತ್ತು ವಾಣಿಜ್ಯ ಟೆಂಡರ್‌ನ ದ್ವೈವಾರ್ಷಿಕ ಗುತ್ತಿಗೆ ಹಾಗೂ ತಾಂತ್ರಿಕ ಟೆಂಡರ್ ಭಾಗ –1 ರ ಅರ್ಹತೆ ಪಡೆಯುವ ಸಲುವಾಗಿ ಅರ್ಜಿ ಸಲ್ಲಿಸುತ್ತಿರುವ ಬಗ್ಗೆ ನನ್ನ ದರ ನಮೂದಿಸಿ ಅಗತ್ಯವಿರುವ ಎಲ್ಲಾ ಮಾಹಿತಿ ಮತ್ತು ದಾಖಲೆಗಳನ್ನು ಈ ಕೆಳಕಂಡಂತೆ ಸಲ್ಲಿಸುತ್ತಿದ್ದೇನೆ.

ಶ್ರೀ/ಶ್ರೀಮತಿ.................................................... ಆದ ನಾನು / ನನ್ನ ಪರವಾಗಿ ಕ್ರಮ ಸಂಖ್ಯೆ .....................................ಮಿಲ್ಕ್ ಪಾರ್ಲರ್‌ಗೆ ದೃಢೀಕೃತ ದಾಖಲೆಗಳೊಂದಿಗೆ ತಾಂತ್ರಿಕ ಮತ್ತು ವಾಣಿಜ್ಯ ಟೆಂಡರ್‌ನ ಕಾನೂನಿಗೆ ಒಳಪಟ್ಟು, ಟೆಂಡರ್‌ನಲ್ಲಿ ಭಾಗವಹಿಸಲು ದಾಖಲೆಗಳನ್ನು ಲಗತ್ತಿಸಿರುತ್ತೇನೆ.

ನಾನು ಟೆಂಡರ್ ಪ್ರಕಟಣೆಯಲ್ಲಿ ತಿಳಿಸಿರುವ ಸೂಚನೆಗಳು ನಿಯಮ ಮತ್ತು ನಿಬಂಧನೆಗೊಳಪಟ್ಟು ತಾಂತ್ರಿಕ ಮತ್ತು ವಾಣಿಜ್ಯ ಟೆಂಡರ್ ಗುತ್ತಿಗೆಯಲ್ಲಿ ಭಾಗವಹಿಸುತ್ತಿದ್ದೇನೆ.

ನನಗೆ ತಿಳಿದ ಮಟ್ಟಿಗೆ ಟೆಂಡರ್ ಸಮಿತಿಯು ಅರ್ಜಿಯನ್ನು ಯಾವುದೇ ಸೂಚನೆ ನೀಡದೆ ಅಂಗೀಕರಿಸುವ ಮತ್ತು ತಿರಸ್ಕರಿಸುವ ಸಂಪೂರ್ಣ ಅಧಿಕಾರವನ್ನು ಹೊಂದಿರುತ್ತದೆ.

ವಾಣಿಜ್ಯ ಟೆಂಡರ್ ಭಾಗ–2ನ್ನು ತೆರೆದ ದಿನದಿಂದ 60 ದಿನಗಳ ಕಾಲ ನನ್ನ ಟೆಂಡರ್ / ದರ ನೀಡಿಕೆ ಊರ್ಜಿತಾವಸ್ಥೆಯಲ್ಲಿಡಲು ಒಪ್ಪಿರುತ್ತೇನೆ.

**ಮಿಲ್ಕ್ ಪಾರ್ಲರ್ ಹೆಸರು :**

**ಟೆಂಡರ್‌ದಾರರ ಸಹಿ ಮತ್ತು ಹೆಸರು**
(ದಪ್ಪ ಅಕ್ಷರಗಳಲ್ಲಿ)

**ಅಡಕಗಳು :**

1. ನನ್ನ ಪರವಾಗಿ ಸಹಿ ಮಾಡುವ ಅಧಿಕಾರ ಪತ್ರ
2. ತಾಂತ್ರಿಕ ಟೆಂಡರ್ ಅರ್ಜಿಯನ್ನು ಮೊಹರು ಮಾಡಿ ಪ್ರತ್ಯೇಕವಾಗಿ ಸಲ್ಲಿಸಿದೆ.
3. ವಾಣಿಜ್ಯ ಟೆಂಡರ್ ಅರ್ಜಿಯನ್ನು ಮೊಹರು ಮಾಡಿದ ದರ ಪಟ್ಟಿಯೊಂದಿಗೆ ಪ್ರತ್ಯೇಕವಾಗಿ ಸಲ್ಲಿಸಿದೆ.

# ಅನುಬಂಧ – ಬಿ

## ದರಪಟ್ಟಿ ಸಲ್ಲಿಸಲು ನಿಯಮ ನಿಬಂಧನೆಗಳು

**2.0 ಅರ್ಹತೆಗಳು :**

2.1 ಎಲ್ಲಾ ಅರ್ಜಿ ಮೂಲಗಳವರಿಗೂ ದರಪಟ್ಟಿ ದಸ್ತಾವೇಜು ಸಲ್ಲಿಸಲು ಮುಕ್ತ ಅವಕಾಶ ಕಲ್ಪಿಸಲಾಗಿದೆ.

2.2 ಲೈಸೆನ್ಸಿ ಪಡೆದುಕೊಳ್ಳಲು ಅರ್ಹರಾಗಬೇಕಾದರೆ ಪರಿಣಾಮಕಾರಿಯಾಗಿ ಕೆಲಸ/ ಕಾರ್ಯ ನಿರ್ವಹಿಸಲು ಬೇಕಾದ ಸಾಮರ್ಥ್ಯ ಅಗತ್ಯ ಸಂಪನ್ಮೂಲಗಳಿರುವುದರ ಬಗ್ಗೆ ದಾಖಲೆ, ಪುರಾವೆಗಳನ್ನು ಶಿವಮೊಗ್ಗ ಹಾಲು ಒಕ್ಕೂಟಕ್ಕೆ ಒದಗಿಸತಕ್ಕದ್ದು. ಈ ಕಾರಣದಿಂದಾಗಿ ದರಪಟ್ಟಿ, ದಸ್ತಾವೇಜು ಸಲ್ಲಿಸುವುದರ ಪ್ರಸ್ತಾವನೆಗಳಲ್ಲಿ ಕೆಳಗೆ ನಮೂದಿಸಿರುವ ಮಾಹಿತಿಗಳನ್ನು ಪೂರೈಕೆ ಮಾಡತಕ್ಕದ್ದು.

ಅ) ಕಾಮಗಾರಿಗೆ ದರಪಟ್ಟಿ : ದಸ್ತಾವೇಜು ಸಲ್ಲಿಸುವವರು ಆಧಾರ್ ಕಾರ್ಡ್ ಮತ್ತು ಪಾನ್ ಕಾರ್ಡ್ ಜೆರಾಕ್ಸ್ ಪತ್ರಿಯನ್ನು ಹಾಗೂ ಸಂಬಂಧಪಟ್ಟ ಅಗತ್ಯ ದಾಖಲೆಗಳನ್ನು ದರಪಟ್ಟಿ – ದಸ್ತಾವೇಜಿನೊಂದಿಗೆ ಲಗತ್ತಿಸತಕ್ಕದ್ದು.

**3.0 ದರಪಟ್ಟಿ – ದಸ್ತಾವೇಜು ಸಲ್ಲಿಕೆ ವೆಚ್ಚ :**

3.1 ದರಪಟ್ಟಿ – ದಸ್ತಾವೇಜು ಸಲ್ಲಿಕೆಗೆ ಸಂಬಂಧಿಸಿದಂತೆ ಪೂರ್ವಭಾವಿ ಸಿದ್ಧತೆ, ಪ್ರಸ್ತಾವನೆ ಸಿದ್ಧಪಡಿಸುವುದು ಇವೇ ಮುಂತಾದುವಕ್ಕೆ ತಗಲುಬಹುದಾದ ಎಲ್ಲಾ ವೆಚ್ಚವನ್ನು ದರಪಟ್ಟಿ – ದಸ್ತಾವೇಜು ಸಲ್ಲಿಕೆದಾರರೇ ಭರಿಸತಕ್ಕದ್ದು ದರಪಟ್ಟಿ – ದಸ್ತಾವೇಜು ಸಲ್ಲಿಕೆ ಪ್ರಕ್ರಿಯೆ, ನಿರ್ವಹಣೆ ಹಾಗೂ ಫಲಿತಾಂಶದ ಪರಿಣಾಮಕ್ಕೆ ಸಂಬಂಧಿಸಿದಂತೆ, ಶಿವಮೊಗ್ಗ ಹಾಲು ಒಕ್ಕೂಟವು ಯಾವುದೇ ಕಾರಣಕ್ಕೂ ಜವಾಬ್ದಾರರಲ್ಲ.

**4.0 ದರಪಟ್ಟಿ – ದಸ್ತಾವೇಜು ನಿರ್ದೇಶನಗಳು :**

4.1 ದರಪಟ್ಟಿ – ದಸ್ತಾವೇಜುದಾರರು ತಾವು ಸಲ್ಲಿಸಬೇಕಾಗಿರುವ ದರಪಟ್ಟಿ – ದಸ್ತಾವೇಜು ಕುರಿತಂತೆ ನಿರ್ದೇಶಿಸಲಾಗಿರುವ ಎಲ್ಲಾ ನಿಯಮ ನಿಬಂಧನೆಗಳನ್ನು ಎಚ್ಚರಿಕೆಯಿಂದ ಪರೀಕ್ಷಿಸತಕ್ಕದ್ದು, ದರಪಟ್ಟಿ – ದಸ್ತಾವೇಜು ಸಲ್ಲಿಸಲು ಅಗತ್ಯವಾದ ಎಲ್ಲಾ ಅಧಿಕೃತ ಮಾಹಿತಿಗಳು, ದಾಖಲೆಗಳು ದರಪಟ್ಟಿ – ದಸ್ತಾವೇಜಿನೊಂದಿಗೆ ಲಗತ್ತಿಸತಕ್ಕದ್ದು ಹಾಗಲ್ಲದೆ ಪೂರ್ಣ ಮಾಹಿತಿ ನೀಡುವಲ್ಲಿ ವಿಫಲವಾದರೆ ದರಪಟ್ಟಿ – ದಸ್ತಾವೇಜನ್ನು ತಿರಸ್ಕರಿಸಲಾಗುತ್ತದೆ.

**5.0 ದರಪಟ್ಟಿ – ದಸ್ತಾವೇಜು ಸಲ್ಲಿಕೆ ಬೆಲೆ :**

5.1 ದರಪಟ್ಟಿ ಆಹ್ವಾನಿಸಿದ ಸಂದರ್ಭದಲ್ಲಿ ನಿಖರವಾಗಿ ಸೂಚಿಸಲಾಗಿರುವ ನಿಯಮ ನಿಬಂಧನೆಯಂತೆ ದರಪಟ್ಟಿ – ದಸ್ತಾವೇಜಿನ ಪರಿಶಿಷ್ಟ ಗುತ್ತಿಗೆಯ ಪೂರ್ಣ ಅವಧಿಗೆ ಎಂದಿರುವುದನ್ನು ದರಪಟ್ಟಿ – ದಸ್ತಾವೇಜುದಾರರು ಸ್ಪಷ್ಟ ಮಾತಿನಿಂದ ದರಪಟ್ಟಿ – ದಸ್ತಾವೇಜಿನಲ್ಲಿ ಖಚಿತವಾಗಿ ದಾಖಲಿಸತಕ್ಕದ್ದು, ಹಾಗಲ್ಲದೆ ಬೇರೆ ರೀತಿ ಇರತಕ್ಕದ್ದಲ್ಲ.

**6.0 ನಿಗದಿತ ದರ :**

6.1 ದಾಖಲೆಗೊಂಡ ದರ : ದರಪಟ್ಟಿ – ದಸ್ತಾವೇಜುದಾರನೊಂದಿಗೆ ಸಂಧಾನಗೊಂಡ ನಿಗದಿತ ದರ, ಗುತ್ತಿಗೆಯ ಪೂರ್ಣ ಅವಧಿಯಲ್ಲಿ ಜಾರಿಯಲ್ಲಿರತಕ್ಕದ್ದು, ಯಾವುದೇ ಕಾರಣಕ್ಕಾಗಿ ಯಾವುದೇ ಬಾಬ್ತಿನಲ್ಲಿ ಹೆಚ್ಚಳ ಆಗುವುದಕ್ಕೆ ಅವಕಾಶ ಇರುವುದಿಲ್ಲ ಹಾಗೂ ಅಂತಹ ವ್ಯತ್ಯಯವನ್ನು ಪರಿಗಣಸದೆ ಜೊತೆಗೆ ತಿರಸ್ಕರಿಸಲಾಗುವುದು. ಕೆಲವು ವಿಶೇಷ ಸಂದರ್ಭಗಳಲ್ಲಿ ನಿಗದಿತ ದರವನ್ನು ಪರಿಷ್ಕರಿಸಲು ಗುತ್ತಿಗೆದಾರರು ಮನವಿ ನೀಡಿದಲ್ಲಿ ಸದರಿ ಮನವಿಯನ್ನು ಸಂದರ್ಭಕ್ಕನುಗುಣವಾಗಿ ಪರಿಗಣಿಸಬಹುದಾಗಿದೆ. ಆದರೆ ಈ ವಿಷಯದಲ್ಲಿ ಶಿವಮೊಗ್ಗ ಹಾಲು ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕರ ತೀರ್ಮಾನವೇ ಅಂತಿಮವಾಗಿರುತ್ತದೆ.

6.2 ಗುತ್ತಿಗೆದಾರರು ನಮೂದಿಸುವ ಲೈಸೆನ್ಸಿ ಫೀ ದರದ ಜೊತೆಗೆ ಶೇ.18 ರಷ್ಟು ಜಿ.ಎಸ್.ಟಿ ಯನ್ನು ಲೈಸೆನ್ಸಿದಾರರೇ ಪಾವತಿಸಬೇಕಾಗುತ್ತದೆ.

**7.0 ದರಪಟ್ಟಿ – ದಸ್ತಾವೇಜಿನ ಸಿಂಧುತ್ವ :**

7.1 ದರಪಟ್ಟಿ – ದಸ್ತಾವೇಜಿನ ಸಲ್ಲಿಕೆ, ಅಂಗೀಕಾರಗೊಂಡಿರುವ ರೀತ್ಯಾ ದರಪಟ್ಟಿ ತೆರೆಯುವ ಪ್ರಕ್ರಿಯೆಯ ದಿನಾಂಕದಿಂದ 60 ದಿನಗಳು ಮಾತ್ರ ಅದರ ಸಿಂಧುತ್ವ ಊರ್ಜಿತವಾಗಿರುತ್ತದೆ.

7.2 ಕೆಲವಾರು ಅನಿವಾರ್ಯ ಪರಿಸ್ಥಿತಿಯಲ್ಲಿ ಮಾತ್ರ ದರಪಟ್ಟಿ – ದಸ್ತಾವೇಜಿನ ಸಿಂಧುತ್ವ ಅವಧಿ ಮುಕ್ತಾಯಗೊಳ್ಳುವ ಮುನ್ನ ಶಿವಮೊಗ್ಗ ಹಾಲು ಒಕ್ಕೂಟವು ದರ ಪಟ್ಟಿದಾರರನ್ನು ನಿಗದಿತ ಸಿಂಧುತ್ವ ಅವಧಿಯನ್ನು ವಿಸ್ತರಿಸಬಹುದಾಗಿದೆ. ವಿಸ್ತರಣೆ ಕೋರಿಕೆಯನ್ನು ಬರವಣಿಗೆಯಲ್ಲಿ, ತಂತಿ ಸಂದೇಶದ ಮೂಲಕ ದೂರವಾಣಿ ಸಂಪರ್ಕದ ಮೂಲಕ ಮಾಡಬಹುದಾಗಿದೆ. ಆದರೆ ದರಪಟ್ಟಿ – ದಸ್ತಾವೇಜು ಸಲ್ಲಿಕೆ ಸಂದರ್ಭದಲ್ಲಿ ಒದಗಿಸಲಾಗಿದ್ದ ಆಧಾರ ನೀಡಿಕೆಯನ್ನು (ಭದ್ರತಾ ಠೇವಣಿಯನ್ನು) ಅದಕ್ಕನುಗುಣವಾಗಿ ವಿಸ್ತರಿಸಲು ಗುತ್ತಿಗೆದಾರರಿಗೆ ತಿಳಿಸಬಹುದಾಗಿರುತ್ತದೆ.

**8.0 ದರಪಟ್ಟಿ – ದಸ್ತಾವೇಜು ಸಲ್ಲಿಕೆಗೆ ಆಧಾರ ನೀಡಿಕೆ :**

8.1 ದರಪಟ್ಟಿದಾರ ದರಪಟ್ಟಿ – ದಸ್ತಾವೇಜು ಸಲ್ಲಿಕೆ ನಿಯಮದಡಿ ಪಾರ್ಲರ್ ಲೈಸೆನ್ಸಿಗೆ ಅವುಗಳ ಮುಂದೆ ಸೂಚಿಸಿರುವಂತೆ ಇ–ಪ್ರೋಕ್ಯೂರ್‌ಮೆಂಟ್ ನಿಯಮವಳಿಯಂತೆ ಆಧಾರ ನೀಡಿಕೆ (ಇ.ಎಂ.ಡಿ.) ಒದಗಿಸತಕ್ಕದ್ದು.

8.2 ಆಧಾರ ನೀಡಿಕೆ ಮೊತ್ತವನ್ನು (ಇ.ಎಂ.ಡಿ.ಮೊತ್ತವನ್ನು) ಟೆಂಡರ್ ಪ್ರಕಟಣೆಯಲ್ಲಿ ಪ್ರಕಟಿಸಿದಂತೆ ಇ–ಪ್ರೋಕ್ಯೂರ್‌ಮೆಂಟ್ ನಿಯಾಮವಳಿಯಂತೆ ಸಲ್ಲಿಸುವುದು.

8.3 ದರಪಟ್ಟಿ – ದಸ್ತಾವೇಜುದಾರ ಪ್ರತಿ ಪಾರ್ಲರ್‌ಗೆ ಪ್ರತ್ಯೇಕ ದರಪಟ್ಟಿ – ದಸ್ತಾವೇಜು ಸಲ್ಲಿಸತಕ್ಕದ್ದು.

8.4 ಯಾವುದೇ ದರಪಟ್ಟಿ ಸಲ್ಲಿಕೆಯ ಜೊತೆ ನಿಗಧಿತ ಆಧಾರ (ಇ.ಎಂ.ಡಿ.) ನೀಡಿಕೆ ಇರದಿದ್ದರೆ ಅಥವಾ ನಿಗದಿತ ಮೊತ್ತಕ್ಕಿಂತ ಕಡಿಮೆ ಇದ್ದರೆ ಅಂತಹ ದರಪಟ್ಟಿ – ದಸ್ತಾವೇಜನ್ನು ಶಿವಮೊಗ್ಗ ಹಾಲು ಒಕ್ಕೂಟವು ತಿರಸ್ಕರಿಸುತ್ತದೆ.

8.5 ಅಂಗೀಕಾರ ಆಗದ ದರಪಟ್ಟಿದಾರರಿಗೆ ಅವರು ಸಲ್ಲಿಸಿರುವ ಆಧಾರ (ಇ.ಎಂ.ಡಿ.) ಮೊತ್ತವನ್ನು ಆದಷ್ಟು ಶೀಘ್ರವಾಗಿ ಪ್ರಾಮಾಣಿಕವಾಗಿ ಹಿಂತಿರುಗಿಸಲಾಗುವುದು. ಅಂದರೆ ಅದು ನಮ್ಮ ದಸ್ತಾವೇಜಿನಲ್ಲಿ ಪ್ರಕಟಿಸಿರುವಂತೆ ದರಪಟ್ಟಿಯ ಸಿಂಧುತ್ವದ ನಿಗದಿತ ಅವಧಿಯ ನಂತರದ 30 ದಿನಗಳೊಳಗಾಗಿ

8.6 ಅಂಗೀಕಾರ ಆಗುವ ದರಪಟ್ಟಿದಾರರಿಗೆ, ಅವರು ಸಲ್ಲಿಸಿರುವ ಆಧಾರ ಮೊತ್ತವನ್ನು ಒಪ್ಪಂದಕ್ಕೆ ಸಹಿ ಹಾಕಿದಾಗ ಹಾಗೂ ಅಗತ್ಯವಾದ ಕಾರ್ಯ ನಿರ್ವಹಣಾ ಪ್ರಮಾಣ ಪತ್ರವನ್ನು ಒದಗಿಸಿದಾಗ ಹಿಂತಿರುಗಿಸಲಾಗುವುದು.

8.7 ದರಪಟ್ಟಿದಾರ ಸಲ್ಲಿಸಿರುವ ಇ.ಎಂ.ಡಿ./ಆಧಾರ ಮೊತ್ತಕ್ಕೆ ಬಡ್ಡಿಯನ್ನು ಶಿವಮೊಗ್ಗ ಹಾಲು ಒಕ್ಕೂಟ ಪಾವತಿಸುವುದಿಲ್ಲ.

8.8 ದರಪಟ್ಟಿದಾರ ಸಲ್ಲಿಸುವ ಇ.ಎಂ.ಡಿ./ಆಧಾರ ಮೊತ್ತವನ್ನು ಕೆಳಕಂಡ ಸಂಧರ್ಭಗಳಲ್ಲಿ ಮುಟ್ಟುಗೋಲು ಹಾಕಿಕೊಳ್ಳಬಹುದು.

8.9 ದರಪಟ್ಟಿ ಸಲ್ಲಿಕೆ ಸಿಂಧುತ್ವದ ಅವಧಿಯಲ್ಲಿ ತನ್ನ ದರಪಟ್ಟಿಯನ್ನು ಹಿಂದಕ್ಕೆ ಪಡೆದಿದ್ದೇ ಆದರೆ

8.10 ಅಂಗೀಕಾರ ಆದ ಕಾರಣ ದರಪಟ್ಟಿದಾರನು ನಿಗದಿತ ಕಾಲಾವಧಿಯಲ್ಲಿ

ಅ) ಠೇವಣಿ ಹಣ ಪಾವತಿಸಿ ಒಪ್ಪಂದಕ್ಕೆ ಸಹಿ ಮಾಡದೇ ಇದ್ದರೆ

**ಅಥವಾ**

ಆ) ಅಗತ್ಯ ಕಾರ್ಯ ನಿರ್ವಹಣಾ ಭರವಸಾ ಪತ್ರ ನೀಡದಿದ್ದರೆ ಅಥವಾ ನಿಗಧಿತ ಅವಧಿಯೊಳಗೆ ನಿಗಧಿಪಡಿಸಿದ ದಾಖಲೆಗಳನ್ನು ಒದಗಿಸದಿದ್ದರೆ,

**9.0 ದಸ್ತಾವೇಜು ಮಾದರಿ ಹಾಗೂ ದರಪಟ್ಟಿಗೆ ಸಹಿ ಮಾಡುವುದು :**

9.1 ದರಪಟ್ಟಿ ಸಲ್ಲಿಕೆಗೆ ಸಂಬಂಧಿಸಿದಂತೆ ತಾನು ಖರೀದಿಸಿದ ದಸ್ತಾವೇಜು ಮಾದರಿ, ಅದನ್ನು ಸಿದ್ದಪಡಿಸಿ ಅಧಿಕೃತ ಮೂಲ ದಾಖಲೆಗಳೊಂದಿಗೆ ಪ್ರಸ್ತಾವನೆ ಸಲ್ಲಿಸುವುದು.

9.2 ದರಪಟ್ಟಿ ಸಲ್ಲಿಕೆಗೆ ಸಂಬಂಧಿಸಿದ ದಸ್ತಾವೇಜಿನ ಎಲ್ಲಾ ಪುಟಗಳಲ್ಲಿ ಅಧಿಕೃತವಾಗಿ ನಾಮ ನಿರ್ದೇಶನಗೊಂಡ ಗುತ್ತಿಗೆ ವ್ಯಕ್ತಿ ಸಹಿ ಮಾಡತಕ್ಕದ್ದು, ದಸ್ತಾವೇಜಿನ ಎಲ್ಲಾ ಪುಟಗಳಲ್ಲಿ ಹಾಗೂ ತಿದ್ದುಪಡಿ ಮಾಡಿದ ಕಡೆಗಳೆಲ್ಲೆಲ್ಲಾ ಭರ್ತಿಮಾಡಿದ ವ್ಯಕ್ತಿ ಅಥವಾ ನಾಮನಿರ್ದೇಶನಗೊಂಡ ವ್ಯಕ್ತಿ ಆತನ ಹೆಸರಿನ ಅಧ್ಯ–ಅಕ್ಷರದಲ್ಲಿ ಸಹಿಯನ್ನು ಹೆಚ್ಚುವರಿಯಾಗಿ ಮಾಡತಕ್ಕದ್ದು.

9.3 ದರಪಟ್ಟಿಯ ಪೂರ್ಣ ದಸ್ತಾವೇಜಿನಲ್ಲಿ ಯಾವುದೇ ಬದಲಾವಣೆ ಮಾಡತಕ್ಕದ್ದಲ್ಲ. ಹಾಗೂ ಅಳಿಸತಕ್ಕದ್ದಲ್ಲ. ಆದರೆ ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಒಕ್ಕೂಟ ನೀಡಬಹುದಾದ ಸೂಚನೆಗಳಿಗೆ ಈ ಕಟ್ಟುಪಾಡು ಅನ್ವಯಿಸುವುದಿಲ್ಲ ಅಥವಾ ದರಪಟ್ಟಿದಾರ ಅಕಸ್ಮಾತಾಗಿ ಮಾಡಿರಬಹುದಾದ ತಪ್ಪುಗಳನ್ನು ಅಗತ್ಯವಾಗಿ ಸರಿಪಡಿಸಬಹುದಾಗಿರುತ್ತದೆ. ಅಂತಹ ಸಂದರ್ಭಗಳಲ್ಲಿ ದಸ್ತಾವೇಜಿನಲ್ಲಿ ಸಹಿ ಮಾಡುವ ಅಧಿಕೃತ ದರಪಟ್ಟಿದಾರ ತನ್ನ ಹೆಸರಿನ ಅಧ್ಯ–ಅಕ್ಷರಗಳ ಸಹಿ ಮಾಡತಕ್ಕದ್ದು, ಬರವಣಿಗೆಯ ಮೇಲೆ ಬರವಣಿಗೆ ಮಾಡಲು ಅನುಮತಿ ಇರುವುದಿಲ್ಲ.

**10.0 ದರಪಟ್ಟಿ ಸಲ್ಲಿಕೆಗೆ ಅಂತಿಮ ದಿನಾಂಕ ಪ್ರಕಟಣೆ :**

10.1 ದರಪಟ್ಟಿ ಸಲ್ಲಿಕೆಗೆ ಆಹ್ವಾನಿಸಿದ ಸಂದರ್ಭ ನಿಗದಿಪಡಿಸಿದ ದಿನಾಂಕ ಹಾಗೂ ವೇಳೆಯೊಳಗೆ ಸಂಬಂಧಪಟ್ಟ ದಸ್ತಾವೇಜನ್ನು ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಒಕ್ಕೂಟಕ್ಕೆ ತಲುಪಿಸತಕ್ಕದ್ದು.

10.2 ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಒಕ್ಕೂಟವು ತನ್ನ ವಿವೇಚನೆಗೆ ಅಗತ್ಯ ಕಂಡು ಬಂದರೆ ಟೆಂಡರ್‌ನಲ್ಲಿ ಪ್ರಕಟಿಸಿದ ಅಂತಿಮ ದಿನಾಂಕವನ್ನು ಮುಂದೂಡಬಹುದಾಗಿರುತ್ತದೆ. ನಂತರ ತಿದ್ದುಪಡಿ ದಿನಾಂಕವನ್ನು ಪ್ರಕಟಿಸಲು ಶಿವಮೊಗ್ಗ ಹಾಲು ಒಕ್ಕೂಟವು ಹಾಗೂ ದರಪಟ್ಟಿದಾರರ ನಡುವಣ ತನ್ನ ಹಕ್ಕು ಹಾಗೂ ಬಾಧ್ಯತೆಯಿಂದ ಹಿಂದೆ ಪ್ರಕಟಿಸಿದ ಮೂಲ ಕೊನೆಯ ದಿನಾಂಕದ ಸಿಂಧುತ್ವವನ್ನು ರದ್ದುಗೊಳಿಸಿ, ಮುಂದೂಡಿದ ಹೊಸ ಅಂತಿಮ ದಿನಾಂಕವನ್ನು ಪ್ರಕಟಿಸಿ ಸಿಂಧುಗೊಳಿಸಬಹುದಾಗಿರುತ್ತದೆ.

**11.0 ದರಪಟ್ಟಿ ದಸ್ತಾವೇಜು ತೆರೆಯುವ ಕ್ರಮ :**

11.1 ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಒಕ್ಕೂಟವು ದರಪಟ್ಟಿ ದಸ್ತಾವೇಜು ಸಲ್ಲಿಸಿದ ಎಲ್ಲಾ ದರಪಟ್ಟಿದಾರರ ಪ್ರತಿನಿಧಿಗಳ ಸಮ್ಮುಖದಲ್ಲಿ ಮೊಹರುಮಾಡಿದ ದರಪಟ್ಟಿ ದಸ್ತಾವೇಜಿನ ಲಕೋಟೆಗಳನ್ನು ತೆರೆಯುತ್ತದೆ. ಅದೂ ಕೂಡ ದರಪಟ್ಟಿದಾರರು ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಒಕ್ಕೂಟದೊಂದಿಗೆ ಸಂಪರ್ಕ ಏರ್ಪಡಿಸಿಕೊಂಡು ಆಯ್ಕೆ ಮಾಡಿಕೊಳ್ಳುವ ಕಛೇರಿಯ ವೇಳೆಯಲ್ಲಿಯೇ ಜೊತೆಗೆ ದರಪಟ್ಟಿ ಸಲ್ಲಿಕೆಗೆ ಆಹ್ವಾನಿಸಿದ ಸಂದರ್ಭದಲ್ಲಿ ಸೂಚಿಸಲಾಗಿದ್ದ ಅಂತಿಮ ದಿನಾಂಕ ಹಾಗೂ ವೇಳೆಗೆ ಅನುಗುಣವಾಗಿ ಈ ಪ್ರಕ್ರಿಯೆ ನಡೆಯುತ್ತದೆ. ಹಾಜರಾದ ದರಪಟ್ಟಿ ಸಲ್ಲಿಕೆದಾರರು ಅಥವಾ ಅವರ ಪ್ರತಿನಿಧಿಗಳು ಕಛೇರಿಯ ಕಡತದಲ್ಲಿ ತಮ್ಮ ಹಾಜರಾತಿಯನ್ನು ದೃಢೀಕರಿಸಲು ಹಾಜರಾತಿಗೆ ಸಹಿ ಹಾಕಬೇಕಾಗುತ್ತದೆ.

**12.0 ಜವಾಬ್ದಾರಿಯುತವಾಗಿ ಸಲ್ಲಿಕೆಯಾಗಿರುವ ಕುರಿತು ನಿರ್ಧಾರ :**

12.1 ದರಪಟ್ಟಿ ದಸ್ತಾವೇಜಿನ ವಿವರ ಮೌಲ್ಯಮಾಪನಕ್ಕೆ ಪೂರ್ವಭಾವಿಯಾಗಿ ಪ್ರತಿಯೊಂದು ದರಪಟ್ಟಿ ದಸ್ತಾವೇಜುಗಳು ಎಲ್ಲಾ ರೀತಿಯಿಂದಲೂ ಅಗತ್ಯಕ್ಕೆ ತಕ್ಕಂತೆ ಜವಾಬ್ದಾರಿಯುತವಾಗಿ ಸಲ್ಲಿಕೆ ಆಗಿದೆಯೇ ಎಂದು ನಿರ್ಧಾರ ಕೈಗೊಳ್ಳಲು ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಒಕ್ಕೂಟವು ಮುಂದಾಗುತ್ತದೆ.

12.2 ನಿಯಮದ ರೀತ್ಯಾ ಇಂತಹ ನಿರ್ಧಾರ ಕೈಗೊಳ್ಳಲು ಎಲ್ಲಾ ರೀತಿಯಿಂದಲೂ ಜವಾಬ್ದಾರಿಯುತವಾಗಿ ಸಲ್ಲಿಕೆಯಾಗಿರುವ ದರಪಟ್ಟಿ ದಸ್ತಾವೇಜು ಎಂದು ಪರಿಗಣಿತವಾಗಲು ಅದು ವಿಧಿಸಲಾಗಿರುವ ನೀತಿ, ನಿಯಮಗಳಿಗೆ ವಿವರ ಮಾಹಿತಿಗೆ ಬದ್ಧವಾಗಿದ್ದು, ಯಾವುದೇ ರೀತಿಯಿಂದಲೂ ವ್ಯತ್ಯಯಗೊಳ್ಳದ ಹಾಗೂ ಕಾಯ್ದಿರಿಸಿದ ರೀತಿಯದ್ದಾಗಿರಬೇಕು. ವ್ಯತ್ಯಯ ಅಥವಾ ಕಾಯ್ದಿರಿಸುವಿಕೆಯಿಂದಾಗಿ ಅದರ ಆಶಯ ಅಥವಾ ಗುತ್ತಿಗೆಯ ಕಾರ್ಯವ್ಯೈಖರಿಯ ಮೇಲೆ ದುಷ್ಪರಿಣಾಮ ಬೀರುತ್ತದೆ. ಅಥವಾ ಕೆಲದೃಷ್ಟಿಯ ಇತಿಮಿತಿಗೊಳ್ಳುತ್ತದೆ. ಜೊತೆಗೆ ದರಪಟ್ಟಿ ದಸ್ತಾವೇಜಿನೊಂದಿಗೆ ಅಸಂಗತಗೊಳ್ಳುತ್ತದೆ. ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಒಕ್ಕೂಟವು ಹಕ್ಕು ಅಥವಾ ದರಪಟ್ಟಿದಾರರ ಗುತ್ತಿಗೆ ಬಾಧ್ಯತೆ ಇವುಗಳ ಸುಧಾರಣೆ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತದೆ. ವ್ಯತ್ಯಯ ಹಾಗೂ ಕಾಯ್ದಿರಿಸುವಿಕೆ ಇತರೆ ಸ್ಪರ್ಧಾತ್ಮಕ ದರಪಟ್ಟಿದಾರರ ಮೇಲೆ ಕೆಟ್ಟ ಪರಿಣಾಮ ಬೀರುತ್ತದೆ. ಹಾಗಾಗಿ ಎಲ್ಲಾ ರೀತಿಯಿಂದಲೂ ಜವಾಬ್ದಾರಿಯುತ ದರಪಟ್ಟಿ ದಸ್ತಾವೇಜಿನ ಸಲ್ಲಿಕೆ ಆಗಬೇಕಾಗಿದೆ.

12.3 ದರಪಟ್ಟಿ ದಸ್ತಾವೇಜಿನ ಅಗತ್ಯಕ್ಕೆ ಅನುಗುಣವಾಗಿ ಜವಾಬ್ದಾರಿಯುತ ಪ್ರತಿಕ್ರಿಯೆ ಇಲ್ಲವಾದಲ್ಲಿ ಅಂತಹವನ್ನು ಶಿವಮೊಗ್ಗ ಹಾಲು ಒಕ್ಕೂಟವು ತಿರಸ್ಕರಿಸುತ್ತದೆ. ಅನಧಿಕೃತ ವ್ಯತ್ಯಯ ಅಥವಾ ಕಾಯ್ದಿರಿಸುವಿಕೆಯನ್ನು ಸರಿಪಡಿಸಲು ಹಿಂತಿರುಗಿ ಪಡೆದುದ್ದನ್ನು ಮತ್ತೆ ಜವಾಬ್ದಾರಿಯುತಗೊಳಿಸಲಾಗುವುದಿಲ್ಲ.

12.4 ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಒಕ್ಕೂಟ ಯಾವುದೇ ದರಪಟ್ಟಿ ದಸ್ತಾವೇಜನ್ನು ಸ್ವೀಕರಿಸುವುದಕ್ಕೂ ತಿರಸ್ಕರಿಸುವುದಕ್ಕೂ ಅಥವಾ ಎಲ್ಲವನ್ನು ಸಾರಾ ಸಗಟಾಗಿ ತಿರಸ್ಕರಿಸುವುದಕ್ಕೂ ಹಕ್ಕುಳ್ಳದ್ದಾಗಿರುತ್ತದೆ.

12.5 ಮೇಲಿನ ವಿಷಯಗಳನ್ನು ಪೂರೈಸಲಾಗದ ದಸ್ತಾವೇಜನ್ನು ಯಾವುದೇ ಸಮಯದಲ್ಲಿ ಗುತ್ತಿಗೆ ನೀಡಿಕೆಗೆ ಪೂರ್ವಭಾವಿಯಾಗಿ ತಿರಸ್ಕರಿಸುವ ಅಥವಾ ಸ್ವೀಕರಿಸುವ, ಇಲ್ಲವೇ ಪ್ರಕ್ರಿಯೇಯನ್ನೇ ರದ್ದುಪಡಿಸುವ ಹಾಗೂ ಸಾರಾಸಗಟಾಗಿ ಎಲ್ಲವನ್ನೂ ತಿರಸ್ಕರಿಸುವ ಹಕ್ಕನ್ನು ಶಿವಮೊಗ್ಗ ಹಾಲು ಒಕ್ಕೂಟ ಕಾಯ್ದಿರಿಸಿಕೊಂಡಿದೆ. ಪರಿಣಾಮಕ್ಕೆ ಗುರಿಯಾಗುವ ದರಪಟ್ಟಿದಾರರಿಗೆ ಯಾವುದೇ ರೀತಿಯ ಉಪಶಮನಕ್ಕೂ ಬದ್ಧವಾಗದೆ ಮಾಹಿತಿಯನ್ನು ನೀಡಬೇಕಾದ ಹೊಣೆಗಾರಿಕೆಯು ಇಲ್ಲದೇ ಕ್ರಮ ತೆಗೆದುಕೊಳ್ಳಲು ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಒಕ್ಕೂಟ ಹಕ್ಕುಳ್ಳದ್ದಾಗಿದೆ.

**13.0 ಗುತ್ತಿಗೆ ನೀಡಿಕೆ :**

13.1 ದರಪಟ್ಟಿ ದಸ್ತಾವೇಜು ಹಲವು ದೃಷ್ಟಿಯಿಂದ ಜವಾಬ್ದಾರಿಯುತವಾದುದು ಎಂದು ಪರಿಗಣಿತವಾಗಿ ಗರಿಷ್ಟ ದರವನ್ನು ದರಪಟ್ಟಿಯಲ್ಲಾಗಲೀ ಅಥವಾ ಸಂಧಾನದಲ್ಲಾಗಲೀ ಸೂಚಿಸಿರುವುದರಿಂದ ಶಿವಮೊಗ್ಗ ಹಾಲು ಒಕ್ಕೂಟವು ನಿಯಮ 15 ರ ಅಡಿಯಲ್ಲಿ ದರಪಟ್ಟಿದಾರನಿಗೆ ಗುತ್ತಿಗೆ ನೀಡಬಹುದಾಗಿರುತ್ತದೆ. ಹಲವು ದೃಷ್ಟಿಯಿಂದ ಜವಾಬ್ದಾರಿಯುತವಾದವು ಎಂದು ಪರಿಗಣಿತವಾದ ದರಪಟ್ಟಿ ದಸ್ತಾವೇಜಿನ ತೌಲನಿಕ ತಃಖ್ತೆ ಮೂಲಕ ಮೌಲ್ಯಮಾಪನ ಮಾಡಲಾಗದೆ ಹಾಗೂ ಗುತ್ತಿಗೆ ಕಾಮಗಾರಿಯನ್ನು ಪರಿಣಾಮಯುತವಾಗಿ ನಿರ್ವಹಿಸಬಲ್ಲೆ ಎಂಬ ಸಾಮರ್ಥ್ಯ ಹಾಗೂ ಸಂಪನ್ಮೂಲದ ಬಗೆಗೆ ದೃಢೀಕರಣ ಒದಗಿಸಿದರೆ ಗುತ್ತಿಗೆಯನ್ನು ನೀಡಬಹುದಾಗಿರುತ್ತದೆ.

13.2 ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಒಕ್ಕೂಟವು ನಾಮಮಾತ್ರ ಸದಸ್ಯತ್ವಕ್ಕಾಗಿ ನಿಗದಿತ ಮೊತ್ತ ಪಾವತಿಸಿದ ಅವರು / ಅವಳು ಪಡೆದುಕೊಂಡ ನಂತರ ಗುತ್ತಿಗೆಯನ್ನು ನೀಡಬಹುದಾಗಿರುತ್ತದೆ.

**ಟೆಂಡರ್‌ದಾರರ ಸಹಿ ಮತ್ತು ಹೆಸರು**
(ದಪ್ಪ ಅಕ್ಷರಗಳಲ್ಲಿ)

# ಅನುಬಂಧ – ಸಿ

1) ಕ್ರ.ಸಂ. 1 ರಿಂದ 6 ರವರೆಗಿನ ಪಾರ್ಲರ್‌ಗಳಿಗೆ ಅವುಗಳ ಮುಂದೆ ತೋರಿಸಿರುವಂತೆ ಇ.ಎಂ.ಡಿ.ಯನ್ನು ಇ–ಪ್ರೋಕ್ಯೂರ್‌ಮೆಂಟ್ ನಿಯಾಮವಳಿಯಂತೆ ಪಾವತಿಸುವುದು.
2) ಕ್ರ.ಸಂ. 1 ರಿಂದ 6 ರವರೆಗಿನ ಪಾರ್ಲರ್‌ಗಳಿಗೆ ಯಾವುದೇ ಪಾರ್ಲರ್‌ಗೆ ಟೆಂಡರ್ ಪಡೆದರು ಪಾರ್ಲರ್ ಮುಂದೆ ಸೂಚಿಸಿರುವಂತೆ ಕರಾರು ಒಪ್ಪಂದ ಮಾಡಿಕೊಳ್ಳುವ ಸಮಯದಲ್ಲಿ ನಗದು ಭದ್ರತಾ ಠೇವಣಿಯನ್ನು ನೀಡುವುದು.

# ಅನುಬಂಧ – ಡಿ

## 1.0 ಗುತ್ತಿಗೆ ನಿಯಮ ನಿಬಂಧನೆಗಳು :

1. ದರಪಟ್ಟಿ , ದಸ್ತಾವೇಜು, ಅಂಗೀಕಾರ ಆದ ಮೇಲೆ ಗುತ್ತಿಗೆದಾರರು ಆಧಾರದ ಮೊತ್ತವಾಗಿ ಭದ್ರತಾ ಠೇವಣಿ ಇಡು ಹಣವನ್ನು ಆಯಾ ಪಾರ್ಲರ್‌ಗಳಿಗೆ ಸೂಚಿಸಿರುವಂತೆ ಪಾವತಿಸತಕ್ಕದ್ದು. ಈ ರೀತಿಯ ಆಧಾರ ಮೊತ್ತವನ್ನು ಸಂಸ್ಥೆಯಲ್ಲಿ ನಗದು ರೂಪದಲ್ಲಿ/ ಎಫ್.ಡಿ. ಇರಿಸತಕ್ಕದ್ದು ಮತ್ತು ಈ ಮೊತ್ತಕ್ಕೆ ಬಡ್ಡಿ ನೀಡಲಾಗುವುದಿಲ್ಲ. ಗುತ್ತಿಗೆ ಅವಧಿ ಮುಕ್ತಾಯದ ನಂತರ ಸಂಸ್ಥೆಗೆ ಯಾವುದೇ ಬಾಕಿ ಇಲ್ಲವೆಂದು ದೃಢಪಟ್ಟನಂತರ ಈ ಹಣವನ್ನು ಹಿಂತಿರುಗಿಸಲಾಗುವುದು. ಗುತ್ತಿಗೆದಾರರು ತಮ್ಮ ಕರ್ತವ್ಯದಿಂದ ವಿಮುಖನಾದರೆ ಅಂತಹವರು ಡೈರಿಯಲ್ಲಿಟ್ಟಿರುವ ಇಡು ಹಣವನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

2. ಗುತ್ತಿಗೆದಾರ ತನಗೆ ದತ್ತವಾದ ಗುತ್ತಿಗೆಯನ್ನು ಮತ್ತೊಬ್ಬರಿಗೆ ವರ್ಗಾಯಿಸಲು ಅವಕಾಶವಿರುವುದಿಲ್ಲ. ಆದರೂ ಸಹ ಅನಿವಾರ್ಯ ಸಂದರ್ಭದಲ್ಲಿ ಆದೇಶ ಪಡೆದು ಪಾರ್ಲರ್ ನಿರ್ವಹಣೆ ಮಾಡಿದ ಕನಿಷ್ಟ ಮೂರು ತಿಂಗಳ ನಂತರ ನಿಯಾಮಾನುಸಾರ ವರ್ಗಾವಣೆ ಶುಲ್ಕ ಪಾವತಿಸಿದಲ್ಲಿ ಒಂದು ಬಾರಿ ಮಾತ್ರ ವರ್ಗಾವಣೆ ಮಾಡಲಾಗುವುದು.

3. ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಒಕ್ಕೂಟವು ತನ್ನ ಅಂತಿಮ ಆದೇಶದಲ್ಲಿ ಸೂಚಿತ ದಿನಾಂಕದಿಂದು ಆರಂಭಗೊಂಡು ಎರಡು ವರ್ಷಗಳ ಅವಧಿಗೆ ಪಾರ್ಲರ್ ನಿರ್ವಹಣೆ ಕೈಗೊಳ್ಳತಕ್ಕದ್ದು. ಅಥವಾ ಡೇರಿಯು ತನ್ನ ವಿವೇಚನೆಗೆ ಸರಿಯೆಂದು ಕಂಡುಬಂದಲ್ಲಿ ಎಂಥದೇ ಸಂದರ್ಭದಲ್ಲಿ ಯಾವುದೇ ಕಾರಣ ನೀಡದೇ ಪಾರ್ಲರ್ ನಿರ್ವಹಣೆ ಅವಧಿಯನ್ನು ಕಡಿಮೆ ಅವಧಿಗೆ ನಿಗದಿಪಡಿಸಲು ಅಧಿಕಾರ ಉಳ್ಳದ್ದಾಗಿರುತ್ತದೆ.

4. ಮಿಲ್ಕ್ ಪಾರ್ಲರ್ ನಿರ್ವಹಣೆಯಲ್ಲಿ ವಿಮುಖನಾದ ಲೈಸೆನ್ಸಿದಾರನನ್ನು ಅವಧಿಗೆ ಮುಂಚೆಯೇ ವಜಾ ಮಾಡಿದರೆ ಅಂತಹವನು ಇರಿಸಿರುವ ಇಡು ಹಣವನ್ನು ಭಾಗಶಃ ಅಥವಾ ಪೂರ್ಣ ಮೊತ್ತವನ್ನು ಮುಟ್ಟುಗೋಲು ಹಾಕಿಕೊಳ್ಳುವ ಬಗ್ಗೆ ಯಾವುದು ಸರಿಯೆಂದು ಶಿವಮೊಗ್ಗ ಹಾಲು ಒಕ್ಕೂಟವು ನಿರ್ಧರಿಸುತ್ತದೆ.

5. ಲೈಸೆನ್ಸಿದಾರರನ್ನು ಅಮಾನತುಗೊಳಿಸಿದ ಕಾರಣಕ್ಕಾಗಿ ಲೈಸೆನ್ಸಿದಾರರಿಗೆ ಪರಿಹಾರ ಧನವನ್ನು ನೀಡಲಾಗುವುದಿಲ್ಲ.

6. ಒಪ್ಪಂದವಾದ ಅರ್ಹ ಲೈಸೆನ್ಸಿ ಅವಧಿ ಮುಕ್ತಾಯವಾದ ಮೇಲೂ 3 ತಿಂಗಳಿಗೆ ಮೀರದಂತೆ ಲೈಸೆನ್ಸಿ ಅವಧಿಯನ್ನು ವಿಸ್ತರಿಸಲು ಶಿವಮೊಗ್ಗ ಹಾಲು ಒಕ್ಕೂಟಕ್ಕೆ ಅವಕಾಶವಿರುತ್ತದೆ.

7. ಲೈಸೆನ್ಸಿದಾರರು ಪಾರ್ಲರ್ ಲೈಸೆನ್ಸಿ ಆದೇಶ ಪಡೆದ 1 ತಿಂಗಳೊಳಗಾಗಿ ಜಿ.ಎಸ್.ಟಿ ನೋಂದಣಿ ಮಾಡಿಸಿ ಅದರ ಪ್ರತಿಯನ್ನು ಒಕ್ಕೂಟಕ್ಕೆ ಸಲ್ಲಿಸುವುದು. ತಪ್ಪಿದ್ದಲ್ಲಿ ಲೈಸೆನ್ಸಿಯನ್ನು ರದ್ದುಗೊಳಿಸಿ ಭದ್ರತಾ ಠೇವಣಿಯನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

8. ಮಿಲ್ಕ್ ಪಾರ್ಲರ್ ಲೈಸೆನ್ಸಿ ಗುತ್ತಿಗೆ ಅವಧಿಯು 2 ವರ್ಷದ ಅವಧಿಗೆ ಇದ್ದು, ಪಾರ್ಲರ್ ನಿರ್ವಹಣೆ ತೃಪ್ತಿಕರವಾಗಿದ್ದಲ್ಲಿ ಅವಧಿ ಮುಗಿದ ನಂತರ 3 ತಿಂಗಳ ಅವಧಿಗೆ ವಿಸ್ತರಿಸಬಹುದಾಗಿದ್ದು ಮಧ್ಯಂತರದಲ್ಲಿ ಶಿವಮೊಗ್ಗ ಹಾಲು ಒಕ್ಕೂಟವು ಮಿಲ್ಕ್ ಪಾರ್ಲರ್‌ನ್ನು ತೆರವುಗೊಳಿಸಬೇಕಾದಲ್ಲಿ ಸದರಿ ಅವಧಿಗೆ ಮಾತ್ರ ಸೀಮಿತವಾಗಿರುತ್ತದೆ.

9. ಮಾಸಿಕ ಲೈಸೆನ್ಸಿ ಫೀಯನ್ನು ಶೇ. 18 ರಷ್ಟು ಜಿ.ಎಸ್.ಟಿ ತೆರಿಗೆಯೊಂದಿಗೆ ಪ್ರತಿ ತಿಂಗಳ 5 ನೇ ತಾರೀಖಿನ ಒಳಗಾಗಿ ಒಕ್ಕೂಟಕ್ಕೆ ಪಾವತಿಸತಕ್ಕದ್ದು. ಜಿ.ಎಸ್.ಟಿ ತೆರಿಗೆಯು ಸರ್ಕಾರದ ಆದೇಶಾನುಸಾರ ಕಾಲಕಾಲಕ್ಕೆ ಬದಲಾವಣೆಗೊಳಪಟ್ಟಿರುತ್ತದೆ.

10. ಟೆಂಡರ್ ಸ್ವೀಕೃತ ಆದೇಶ ಪಡೆದ ನಂತರ ಸೂಚಿತ ಅವಧಿಯೊಳಗೆ (ರೂ.100/- ಛಾಪಾ ಕಾಗದದ ಮೇಲೆ) ಕರಾರು ಒಪ್ಪಂದ ಮಾಡಿಕೊಳ್ಳುವುದು ಹಾಗೂ ನಿಗಧಿಪಡಿಸಿದ ಭದ್ರತಾ ಠೇವಣಿ ಹಣವನ್ನು ಒಕ್ಕೂಟಕ್ಕೆ ಸಂದಾಯ ಮಾಡತಕ್ಕದ್ದು. ಸೂಚಿಸಲಾಗಿರುವ ದಿನಾಂಕಗಳೊಳಗಾಗಿ ವಿಧಿ-ವಿಧಾನಗಳನ್ನು ಪೂರೈಸದಿದ್ದಲ್ಲಿ ಒಪ್ಪಿಗೆಯಾಗಿರುವ ಲೈಸೆನ್ಸಿಯನ್ನು ರದ್ದುಪಡಿಸಿ ಇ.ಎಂ.ಡಿ ಮೊತ್ತವನ್ನು ಒಕ್ಕೂಟಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

11. ಒಕ್ಕೂಟವು ನಿಗಧಿಪಡಿಸಿದ ಪ್ರಮಾಣದ ಹಾಲನ್ನು ಪ್ರತಿ ದಿನ ಮಾರಾಟ ಮಾಡಬೇಕಾಗುತ್ತದೆ. ತಪ್ಪಿದ್ದಲ್ಲಿ ಲೈಸೆನ್ಸ್ ಗುತ್ತಿಗೆಯನ್ನು ರದ್ದುಪಡಿಸುವುದರ ಜೊತೆಗೆ ಲೈಸೆನ್ಸಿದಾರರು ಪಾವತಿಸಿದ ಪೂರ್ಣ ಮೊತ್ತವನ್ನು ಮುಟ್ಟುಗೋಲು ಹಾಕಿಕೊಳ್ಳುವ ಹಕ್ಕನ್ನು ವ್ಯವಸ್ಥಾಪಕ ನಿರ್ದೇಶಕರು ಹೊಂದಿರುತ್ತಾರೆ.

12. ಲೈಸೆನ್ಸಿದಾರರ ಲಿಖಿತ ಕೋರಿಕೆಯ ಮೇರೆಗೆ ಹಾಲು ಮತ್ತು ಹಾಲು ಉತ್ಪನ್ನಗಳನ್ನು ದಿನಂಪ್ರತಿ ಸರಬರಾಜು ಮಾಡಲಾಗುವುದು.

13. ಒಕ್ಕೂಟವು ನಿಗಧಿಪಡಿಸಿದ ದರದಲ್ಲಿಯೇ ಹಾಲು ಮತ್ತು ಹಾಲಿನ ಉತ್ಪನ್ನಗಳನ್ನು ಮಾರಾಟ ಮಾಡತಕ್ಕದ್ದು. ದರದ ಪಟ್ಟಿಯನ್ನು ಸಾರ್ವಜನಿಕರಿಗೆ ಸ್ಪಷ್ಟವಾಗಿ ಕಾಣುವ ರೀತಿಯಲ್ಲಿ ಪಾರ್ಲರ್‌ನಲ್ಲಿ ಪ್ರಕಟಿಸತಕ್ಕದ್ದು.

14. ಸರಬರಾಜು ಮಾಡಲಾದ ಹಾಲು ಮತ್ತು ಹಾಲಿನ ಉತ್ಪನ್ನಗಳ ಮೊಬಲಗನ್ನು ಒಕ್ಕೂಟಕ್ಕೆ/ ಒಕ್ಕೂಟವು ನಿಗಧಿಪಡಿಸಿದ ಬ್ಯಾಂಕ್‌ಗೆ/ ವಿತರಣಾ ವಾಹನದವರಿಗೆ ಅದೇ ದಿನ ನಗದು ರೂಪದಲ್ಲಿ ಸಂದಾಯ ಮಾಡತಕ್ಕದ್ದು. ಬಾಕಿ ಉಳಿಸಿಕೊಂಡಲ್ಲಿ ನಿಯಮಾನುಸಾರ ದಂಡ ವಿಧಿಸಲಾಗುವುದು ಹಾಗೂ ಹಾಲು ಮತ್ತು ಹಾಲು ಉತ್ಪನ್ನಗಳ ಮೊತ್ತವನ್ನು ಪಾವತಿಸದಿರುವುದನ್ನು ಟೆಂಡರ್ ನಿಬಂಧನೆ ಉಲ್ಲಂಘನೆ ಎಂದು ಪರಿಗಣಿಸಲಾಗುವುದು ಹಾಗೂ ಟೆಂಡರ್ ಲೈಸೆನ್ಸ್‌ನ್ನು ರದ್ದುಪಡಿಸಲು ಕ್ರಮ ಕೈಗೊಳ್ಳಲಾಗುವುದು.

15. ನಂದಿನಿ ಹಾಲು ಮತ್ತು ಹಾಲಿನ ಉತ್ಪನ್ನಗಳನ್ನು ಒಕ್ಕೂಟದಿಂದಲೇ ಪಡೆಯುವುದು ಮತ್ತು ನಂದಿನಿ ಹಾಲು ಹಾಲಿನ ಉತ್ಪನ್ನಗಳನ್ನಲ್ಲದೆ ಬೇರೆ ಯಾವ ಪದಾರ್ಥವನ್ನು ಪಾರ್ಲರ್‌ಗಳಲ್ಲಿ ಮಾರಾಟ ಮಾಡಬಾರದು.

16. ಮಿಲ್ಕ್ ಪಾರ್ಲರ್ ನಲ್ಲಿ ಕಡ್ಡಾಯವಾಗಿ ಶೀಥಲೀಯಂತ್ರ (ಫ್ರಿಡ್ಜ್) ಇಡತಕ್ಕದ್ದು. ಇದರ ಶುಚಿತ್ವ ಹಾಗೂ ಹಾಳಾಗದಂತೆ ಸುಸ್ಥಿತಿಯಿಂದ ಕಾಪಾಡುವ ಹೊಣೆ ಲೈಸೆನ್ಸಿದಾರರದ್ದೆ ಆಗಿರುತ್ತದೆ. ಪ್ರಮುಖವಾದ(ಮೇಜರ್) ದುರಸ್ತಿಯೇನಾದರೂ ಇದ್ದರೆ ಮಾತ್ರ ಒಕ್ಕೂಟದಿಂದ ಮಾಡಿಕೊಡಲಾಗುವುದು.

17. ಹಾಲು ಮತ್ತು ಹಾಲು ಉತ್ಪನ್ನಗಳಿಗೆ ಸೂಚಿಸಿದ ಗರಿಷ್ಠ ಮಾರಾಟ ದರಕ್ಕಿಂತ ಹೆಚ್ಚಿನ ದರದಲ್ಲಿ ಮಾರಾಟ ಮಾಡಿದ್ದಲ್ಲಿ, ಮೊದಲನೇ ಸಲವಾಗಿದ್ದಲ್ಲಿ ರೂ.1000/- ದಂಡ ಹಾಕಲಾಗುವುದು ಹಾಗೂ ಎರಡನೆಯ ಸಲವಾಗಿದ್ದಲ್ಲಿ ರೂ.2000/- ದಂಡ ಹಾಕುವುದರ ಜೊತೆಗೆ ರದ್ದುಪಡಿಸಲು ಕ್ರಮ ಕೈಗೊಳ್ಳಲಾಗುವುದು.

18. ಪಾರ್ಲರ್‌ನಲ್ಲಿ ಕೆಲಸ ನಿರ್ವಹಿಸುವ ಸಿಬ್ಬಂದಿಯು ಕ್ಯಾಪ್ ಹಾಗೂ ಏಪ್ರಾನ್‌ನ್ನು ತಪ್ಪದೇ ಧರಿಸಬೇಕು. ತಪ್ಪಿದ್ದಲ್ಲಿ ದಂಡಹಾಕಲಾಗುವುದು.

19. ಮಿಲ್ಕ್ ಪಾರ್ಲರ್ ಲೈಸೆನ್ಸಿ ಪಡೆಯಲು ಅರ್ಜಿ ಸಲ್ಲಿಸುವ ಟೆಂಡರ್‌ದಾರರು ಒಕ್ಕೂಟದ ಯಾವುದೇ ಅಧಿಕಾರಿ/ಸಿಬ್ಬಂಧಿಯವರೊಂದಿಗೆ ಯಾವುದೇ ರೀತಿಯಲ್ಲಿ ಸಂಬಂಧವನ್ನು ಹೊಂದಿರತಕ್ಕದ್ದಲ್ಲ.

20. ಪಾರ್ಲರ್ ಆವರಣದಲ್ಲಿ ಶುಚಿತ್ವ ಕಾಪಾಡಬೇಕು. ಶುಚಿತ್ವ ಇಲ್ಲದಿದ್ದಲ್ಲಿ ಸೂಕ್ತ ದಂಡ ಹಾಕುವ ಅಧಿಕಾರ ಒಕ್ಕೂಟದ ಅಧಿಕಾರಿಗಳಿಗಿರುತ್ತದೆ.

21. ಪಾರ್ಲರ್‌ಗಳಲ್ಲಿ ಕೆಲಸ ನಿರ್ವಹಿಸುವ ಸಿಬ್ಬಂದಿಗೆ ಇ.ಎಸ್.ಐ / ಪಿ.ಎಫ್ ಹಾಗೂ ಯಾವುದೇ ಶಾಸನಬದ್ದ ಪಾವತಿಗಳಿದ್ದಲ್ಲಿ ಅದಕ್ಕೆ ಲೈಸೆನ್ಸಿದಾರರೇ ಜವಾಬ್ದಾರರು.

22. ಲೈಸೆನ್ಸಿದಾರರು ಯಾವುದೇ ಕಾರಣಕ್ಕೂ ಮಾರಾಟ ಮಳಿಗೆ(ಪಾರ್ಲರ್)ನ್ನು ಬೇರೆಯವರಿಗೆ ವಹಿಸಿಕೊಡುವುದನ್ನು (ಸಬ್‌ಲೀಜ್) ನಿಷೇಧಿಸಿದೆ. ಆದಾಗ್ಯೂ, ಅನಿವಾರ್ಯ ಸಂದರ್ಭದಲ್ಲಿ ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕರವರ ಪೂರ್ವಾನುಮತಿಯೊಂದಿಗೆ ವಿಧಿವಿಧಾನಗಳನ್ನು ಅನುಸರಿಸಿ ನಿಗಧಿತ ವರ್ಗಾವಣೆ ಶುಲ್ಕ ರೂ.10,000–00ನ್ನು ಒಕ್ಕೂಟಕ್ಕೆ ಪಾವತಿಸಿ ಲೈಸೆನ್ಸಿಯನ್ನು ವರ್ಗಾಯಿಸಿಕೊಳ್ಳಬಹುದಾಗಿರುತ್ತದೆ.

23. ಲೈಸೆನ್ಸಿದಾರರು ಹಾಲು ಮತ್ತು ಹಾಲು ಉತ್ಪನ್ನಗಳನ್ನು ಮಾರಾಟ ಮಾಡಲು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ 2006 ಮತ್ತು ನಿಯಮಗಳು 2011 ರ ಪ್ರಕಾರ ಜಿಲ್ಲಾಮಟ್ಟದ ಸರ್ವೇಕ್ಷಣಾಧಿಕಾರಿ ಅಥವಾ ತಾಲ್ಲೂಕು ಮಟ್ಟದಲ್ಲಿ ಆಹಾರ ಸುರಕ್ಷತಾಧಿಕಾರಿ(ಫುಡ್ ಸೇಫ್ಟಿ ಆಫೀಸರ್) ರವರಿಂದ ಅಧಿಕೃತ ಲೈಸೆನ್ಸ್ ನ್ನು ಪಡೆಯಬೇಕು ಹಾಗೂ ನಗರ ಸಭೆ, ನಗರ ಪಾಲಿಕೆ, ಪುರಸಭೆ ಇನ್ನಿತರ ಪ್ರಾಧಿಕರದಿಂದ ಹಾಲಿನ ಪಾರ್ಲರ್ ನಡೆಸಲು ಲೈಸೆನ್ಸಿ ಪಡೆಯತಕ್ಕದ್ದು. ಹಾಗೂ ವೃತ್ತಿ ತೆರಿಗೆ ಲೈಸೆನ್ಸ್‌ನ್ನು ಪಡೆಯತಕ್ಕದ್ದು ಹಾಗೂ ಅವರ ಲೈಸೆನ್ಸಿ ಅವಧಿಗನುಗುಣವಾಗಿ ನವೀಕರಣ ಮಾಡಿಸಿಕೊಳ್ಳತಕ್ಕದ್ದು.

24. ಪಾರ್ಲರ್ ಲೈಸೆನ್ಸಿದಾರರು ಮಳಿಗೆಯ ವಿದ್ಯುಚ್ಛಕ್ತಿ ವೆಚ್ಚ, ನಗರಸಭೆ / ಪುರಸಭೆ ನೀರಿನ ದರ, ಇನ್ನಿತರ ತೆರಿಗೆಗಳನ್ನು ತಮ್ಮ ವತಿಯಿಂದಲೇ ಭರಿಸತಕ್ಕದ್ದು. ತಪ್ಪಿದ್ದಲ್ಲಿ ಲೈಸೆನ್ಸಿದಾರರ ಭದ್ರತಾ ಠೇವಣಿಯಿಂದ ಭರಿಸುವ ಹಕ್ಕು ಒಕ್ಕೂಟಕ್ಕೆ ಕಾದಿರಿಸಲಾಗಿದೆ.

25. ಲೈಸೆನ್ಸಿದಾರರು ಮಿಲ್ಕ್ ಪಾರ್ಲರನ್ನು ಬೆಳಗ್ಗೆ 5.00 ಗಂಟೆಯಿಂದ ರಾತ್ರಿ 11.00 ಗಂಟೆಯವರೆಗೆ ತೆರೆದಿರಬೇಕು. ಮಿಲ್ಕ್ ಪಾರ್ಲರ್‌ನಲ್ಲಿ ಮೇಲಿನ ಯಾವುದೇ ವೇಳೆಯಲ್ಲಿ ಹಾಲು ಮತ್ತು ಹಾಲಿನ ಉತ್ಪನ್ನಗಳನ್ನು ದಾಸ್ತಾನಿಟ್ಟುಕೊಂಡು ಗ್ರಾಹಕರ ಬೇಡಿಕೆಯಂತೆ ಮಾರಾಟ ಮಾಡತಕ್ಕದ್ದು.

26. ಯಶಸ್ವಿ ಲೈಸೆನ್ಸಿದಾರರು ಭದ್ರತಾ ಠೇವಣಿ ಮೊತ್ತ ರೂ.________________________________/– (______________________________________ರೂಪಾಯಿಗಳು ಮಾತ್ರ) ಶಿವಮೊಗ್ಗ ಹಾಲು ಒಕ್ಕೂಟಕ್ಕೆ ಪಾವತಿಸಿ ರಶೀದಿ ಪಡೆಯುವುದು ಹಾಗೂ ಸದರಿ ಮೊತ್ತಕ್ಕೆ ಯಾವುದೇ ಬಡ್ಡಿ ನೀಡಲಾಗುವುದಿಲ್ಲ.

27. ಲೈಸೆನ್ ದಾರರ ಟೆಂಡರ್‌ನಲ್ಲಿ ಉದ್ಭವಿಸಬಹುದಾದ ಎಡರು–ತೊಡರುಗಳಿಗೆ ವ್ಯವಸ್ಥಾಪಕ ನಿರ್ದೇಶಕರ ತೀರ್ಮಾನವೇ ಅಂತಿಮವಾದದು.

28. ಲೈಸೆನ್ಸಿದಾರರ ಭದ್ರತಾ ಠೇವಣಿಗೂ ಅವರ ಬಾಕಿ ಮೊತ್ತಕ್ಕೂ ಸಂಬಂಧವಿರುವುದಿಲ್ಲ. ಬಾಕಿ ಉಳಿಸಿಕೊಳ್ಳುವ ಲೈಸೆನ್ಸಿದಾರರಿಗೆ ದಂಡ ವಿಧಿಸುವುದರ ಜೊತೆಗೆ ಲೈಸೆನ್ಸಿಯನ್ನು ರದ್ದುಪಡಿಸಿ ಅವರ ಹೆಸರನ್ನು ಕಪ್ಪುಪಟ್ಟಿಗೆ ಸೇರಿಸಲಾಗುವುದು.

29. ಲೈಸೆನ್ಸಿದಾರರು ಮಾರಾಟ ಮಳಿಗೆ ಹಾಗೂ ತಮಗೆ ಒದಗಿಸಿರುವ ವಸ್ತುಗಳನ್ನು ಉತ್ತಮ ಸ್ಥಿತಿಯಲ್ಲಿ (ಗುತ್ತಿಗೆ: ಲೈಸೆನ್ಸಿ ಪಡೆಯುವ ಸಂದರ್ಭದಲ್ಲಿ ಇದ್ದಂತೆ) ತಮ್ಮ ಗುತ್ತಿಗೆ ಲೈಸೆನ್ಸ್ ಅವಧಿ ಪೂರ್ಣಗೊಂಡ ನಂತರ ಒಕ್ಕೂಟಕ್ಕೆ ಹಿಂದಿರುಗಿಸಬೇಕು. ಮಳಿಗೆ/ ಯಂತ್ರೋಪಕರಣಗಳಿಗೆ ಯಾವುದೇ ರೀತಿಯಲ್ಲಿ ಹಾನಿಯಾಗಿದ್ದಲ್ಲಿ ತತ್ಸಬಂಧ ಮೊತ್ತವನ್ನು ಗುತ್ತಿಗೆದಾರರ ಭದ್ರತಾ ಠೇವಣಿ ಹಣದಿಂದ ಕಠಾಯಿಸಿಕೊಳ್ಳುವ ಅಧಿಕಾರವನ್ನು ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕರು ಹೊಂದಿರುತ್ತಾರೆ. ಇಂತಹ ಹಾನಿಯ ಮೊತ್ತವು ಹಾಗೂ ಹಾಲು ಮತ್ತು ಹಾಲು ಉತ್ಪನ್ನಗಳ ಮಾರಾಟದ ಬಾಕಿಯ ಮೊತ್ತವು ಲೈಸೆನ್ಸಿದಾರರ ಭದ್ರತಾ ಠೇವಣಿ ಮೊತ್ತಕ್ಕಿಂತ ಹೆಚ್ಚಾಗಿದ್ದಲ್ಲಿ ಅಂತಹ ಮೊತ್ತವನ್ನು ಲೈಸೆನ್ಸಿದಾರರ ಚರಸ್ಥಿರ ಆಸ್ತಿಗಳಿಂದ ವಸೂಲಿ ಮಾಡಿಕೊಳ್ಳುವ ಹಕ್ಕನ್ನು ಶಿವಮೊಗ್ಗ ಹಾಲು ಒಕ್ಕೂಟವು ಹೊಂದಿರುತ್ತದೆ.

30. ಒಕ್ಕೂಟದ ಆಸ್ತಿಗೆ ಬೆಂಕಿ, ಕಳ್ಳತನ, ದರೋಡೆ ಮತ್ತು ಲೂಟಿ ಇತ್ಯಾದಿಗಳಿಗೆ ಸಂಬಂಧಿಸಿದಂತೆ ಲೈಸೆನ್ಸಿದಾರರು ತಮ್ಮ ಸ್ವಂತ ಖರ್ಚಿನಲ್ಲಿ ಒಕ್ಕೂಟದ ಹೆಸರಿಗೆ ವಿಮೆ ಮಾಡಿಸತಕ್ಕದ್ದು.

31. ಯಾವುದೇ ಟೆಂಡರ್ ಅರ್ಜಿಯನ್ನು ಒಪ್ಪುವ ಅಥವಾ ತಿರಸ್ಕರಿಸುವ ಅಥವಾ ದರ ನಿಷ್ಕರ್ಶೆ ಮಾಡುವ ಹಕ್ಕನ್ನು ವ್ಯವಸ್ಥಾಪಕ ನಿರ್ದೇಶಕರು, ಶಿವಮೊಗ್ಗ ಹಾಲು ಒಕ್ಕೂಟ ಇವರು ಕಾಯ್ದಿರಿಸಿಕೊಂಡಿದ್ದು ಅಗತ್ಯವಿದ್ದಲ್ಲಿ ದರ ನಿಷ್ಕರ್ಶೆಯನ್ನು ಗರಿಷ್ಠ ದರ ನಮೂದಿಸಿದ ಟೆಂಡರ್‌ದಾರರೊಂದಿಗೆ ಮಾತ್ರ ನಡೆಸಲು ಟೆಂಡರ್‌ನಲ್ಲಿ ಅವಕಾಶವಿರುತ್ತದೆ.

32. ಲೈಸೆನ್ಸ್ ಅವಧಿಯಲ್ಲಿ ಯಾವುದೇ ತಕರಾರುಗಳಿಗೆ ವ್ಯವಸ್ಥಾಪಕ ನಿರ್ದೇಶಕರ ತೀರ್ಮಾನವೇ ಅಂತಿಮವಾಗಿರುತ್ತದೆ.

33. ಮೇಲಿನ ಯಾವುದೇ ನಿಬಂಧನೆಗಳನ್ನು ಉಲ್ಲಂಘಿಸಿದಲ್ಲಿ ದಂಡವನ್ನು ವಿಧಿಸಿ ಎಚ್ಚರಿಕೆ ನೀಡಲಾಗುವುದು ಅಥವಾ ಲೈಸೆನ್ಸ್‌ನ್ನು ರದ್ದುಪಡಿಸುವುದಲ್ಲದೆ ಕಾನೂನು ರೀತ್ಯಾ ಕ್ರಮವನ್ನು ತೆಗೆದುಕೊಳ್ಳುವ ಹಕ್ಕನ್ನು ಒಕ್ಕೂಟವು ಹೊಂದಿರುತ್ತದೆ.

34. ನಂದಿನಿ ಉತ್ಪನ್ನಗಳನ್ನು ಶಿವಮೊಗ್ಗ ಹಾಲು ಒಕ್ಕೂಟದಿಂದಲೇ ಪಡೆಯುವುದು. ಕಹಾಮದ ಸಗಟು ವ್ಯಾಪಾರದಾರರಿಂದಾಗಲೀ, ಸೇಲ್ಸ್ ಡಿಪೋದಿಂದಾಗಲಿ ಖರೀದಿಸಿ ಮಾರಾಟ ಮಾಡಬಾರದು.

35. ಈ ಲೈಸೆನ್ಸಿಗೆ ಸಂಬಂಧಪಟ್ಟಂತೆ ಉಂಟಾಗುವ ಯಾವುದೇ ವಿವಾದಗಳನ್ನು ಶಿವಮೊಗ್ಗ ನಗರದ ನ್ಯಾಯಾಲಯದಿಂದಲೇ ತೀರ್ಮಾನಿಸಬೇಕಾಗಿರುತ್ತದೆ.

ಟೆಂಡರ್‌ದಾರರ ಸಹಿ ಮತ್ತು ಹೆಸರು
(ದಪ್ಪ ಅಕ್ಷರಗಳಲ್ಲಿ)

# ಲೈಸೆನ್ಸಿದಾರರ ಪೂರ್ಣ ಮಾಹಿತಿ

| | | |
|---|---|---|
| 1 | ಲೈಸೆನ್ಸಿದಾರರ ಹೆಸರು | : |
| 2 | ವಿಳಾಸ ದೂರವಾಣಿ ಸಂಖ್ಯೆ / ಫ್ಯಾಕ್ಸ್ ಸಂಖ್ಯೆ / ಮೊಬೈಲ್ ಸಂಖ್ಯೆ | : |
| 3 | ನೀವು ಕಂಪನಿ ಪಾಲುದಾರರಾಗಿದ್ದಲ್ಲಿ ಅದರ ಪೂರ್ಣ ಮಾಹಿತಿ | : |
| 4. | ಪಾರ್ಲರ್ ಲೈಸೆನ್ಸಿ ಪ್ರಾರಂಭಿಸಿದ ವರ್ಷ ನೀವು ವ್ಯವಹರಿಸುವ ಬ್ಯಾಂಕಿನ ವಿಳಾಸ ಮತ್ತು ಖಾತೆ ಸಂಖ್ಯೆ | : |
| 5. | ಪಾರ್ಲರ್ ನಿರ್ವಹಿಸಲು ಇಚ್ಛಿಸುವ ಪಾರ್ಲರ್ ಹೆಸರು/ ಸಂಖ್ಯೆ | : |
| 6. | ಈ ಕೆಳಗಿನ ಮಾಹಿತಿಗಳಿದ್ದಲ್ಲಿ ಲಗತ್ತಿಸುವುದು | : |

ಎ) ಆದಾಯ ತೆರಿಗೆ ಪ್ರಮಾಣ ಪತ್ರ

ಬಿ) ಬ್ಯಾಂಕರ್ ಸಾಲ್ವೆನ್ಸಿ ಪ್ರಮಾಣ ಪತ್ರ

1) ವೃತ್ತಿ ತೆರಿಗೆ ನೋಂದಣಿ ಪತ್ರ

**ತಮ್ಮ ವಿಶ್ವಾಸಿ,**

**ಟೆಂಡರ್‌ದಾರರ ಸಹಿ ಮತ್ತು ವಿಳಾಸ**

ಮೇಲ್ಕಂಡ ಮಾಹಿತಿಗಳು ಸತ್ಯಪೂರ್ಣವಾಗಿದ್ದು ಏನಾದೂ ಬದಲಾವಣೆಗಳು ಆದಲ್ಲಿ ಕೂಡಲೇ ವರದಿ ಮಾಡಲಾಗುವುದು ಹಾಗೂ ಕಾಲಕಾಲಕ್ಕೆ ಆಗುವ ಬದಲಾವಣೆ ಬಗ್ಗೆ ತಿಳಿಸಲಾಗುವುದು.

ಟೆಂಡರ್‌ದಾರರ ಸಹಿ,

ದಿನಾಂಕ :

**ವ್ಯವಸ್ಥಾಪಕ ನಿರ್ದೇಶಕರು**
**ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ**
**ಜಿಲ್ಲಾ ಸಹಕಾರ ಹಾಲು ಒಕ್ಕೂಟ**
**ಮಾಚೇನಹಳ್ಳಿ ನಿದಿಗೆ ಅಂಚೆ**
**ಶಿವಮೊಗ್ಗ.**

ಮಾನ್ಯರೇ,

ವಿಷಯ : ಟೆಂಡರ್‌ನಲ್ಲಿ ಬಿಡ್ ಮಾಡುವ ಬಗ್ಗೆ.

ಉಲ್ಲೇಖ : **ಟೆಂಡರ್ ಪ್ರಕಟಣೆ ಸಂಖ್ಯೆ: ಐ.ಎಫ್.ಟಿ. ಸಂಖ್ಯೆ/ಶಿ.ದಾ.ಚಿ.ಸಹಾಒ/ ಮಾರುಕಟ್ಟೆ/ಟೆಂಡರ್/8155/2020-21 ದಿನಾಂಕ: 22.02.2021**

****

ಮೇಲಿನ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ ಮಿಲ್ಕ್ ಪಾರ್ಲರ್ ನಿರ್ವಹಣೆಗಾಗಿ ದ್ವೈವಾರ್ಷಿಕ ಲೈಸೆನ್ಸಿಗೆ ಸಂಬಂಧಿಸಿದ ಬಿಡ್ ನಿಯಮಾವಳಿಗಳ ಮಾಹಿತಿಗಳನ್ನು ತಿಳಿದು ಹಾಗೂ ಅನುಬಂಧ 'ಬಿ' 'ಸಿ' 'ಡಿ' ನಲ್ಲಿರುವ ಷರತ್ತು ಮತ್ತು ನಿಬಂಧನೆಗಳನ್ನು ಓದಿ, ಅರ್ಥ ಮಾಡಿಕೊಂಡಿದ್ದು ಟೆಂಡರ್‌ನಲ್ಲಿ ಭಾಗವಹಿಸುತ್ತಿದ್ದೇನೆ. ಟೆಂಡರ್‌ಗೆ ಮೂಲತಃ ಅವಶ್ಯಕತೆ ಇರುವ ಇ.ಎಂ.ಡಿ. (ಬಿಡ್ಡು ಠೇವಣಿ) ಯನ್ನು ಇ-ಪ್ರೋಕ್ಯೂರ್‌ಮೆಂಟ್ ನಿಯಮಾವಳಿಯಂತೆ ಸಲ್ಲಿಸಿದೆ. ಪಾರ್ಲರ್ ಲೈಸೆನ್ಸಿಗೆ ಸಂಬಂಧಿಸಿದ ದಾಖಲಾತಿ ಪ್ರತಿಗಳನ್ನು ಸಹ ಲಗತ್ತಿಸಲಾಗಿದೆ.

ಮೊತ್ತ ರೂ. ......................................... (ರೂಪಾಯಿ ........................................ಗಳು ಮಾತ್ರ) ಬ್ಯಾಂಕ್ ...............................................................................

ವಂದನೆಗಳೊಂದಿಗೆ,

ಟೆಂಡರ್ ಅರ್ಜಿ ಸಲ್ಲಿಸಿದವರು :
ಪಾರ್ಲರ್ ಹೆಸರು :

ಟೆಂಡರ್‌ದಾರರ ಸಹಿ,

ವಿಳಾಸ

# ಪಟ್ಟಿ ಪರಿಶೀಲನೆ (ಚೆಕ್ ಲೀಸ್ಟ್)

# ಮಿಲ್ಕ್ ಪಾರ್ಲರ್ ಲೈಸೆನ್ಸಿಗಾಗಿ ಟೆಂಡರ್

| | | | | |
|---|---|---|---|---|
| 01 | ನಿಗದಿತ ಇ.ಎಂ.ಡಿ.ಮೊತ್ತ ಸಲ್ಲಿಸಲಾಗಿದೆಯಾ ? | : | ಹೌದು | ಇಲ್ಲ |
| 02 | ಇ.ಎಂ.ಡಿ.ಗೆ ಸಂಬಂಧಿಸಿದ ಡಿ.ಡಿ. ಅಥವಾ ನಗದು ಪಾವತಿಸಿದ ರಶೀದಿ ಟೆಂಡರ್ ಫಾರಂ ಜೊತೆ ಲಗತ್ತಿಸಲಾಗಿದೆಯಾ | | ಹೌದು | ಇಲ್ಲ |
| 03 | ಲಗತ್ತಿಸಿದಲ್ಲಿ ಡಿ.ಡಿ. ರಶೀದಿ ಸಂಖ್ಯೆ ದಿನಾಂಕ ಮತ್ತು ಯಾವ ಶಾಖೆಯ ಬ್ಯಾಂಕ್<br><br>ಡಿ.ಡಿ. ಸಂಖ್ಯೆ .......................... ದಿನಾಂಕ<br>ಬ್ಯಾಂಕ್ ಹೆಸರು .......................................... | : | | |
| 04 | ಅರ್ಜಿದಾರರ ಪೂರ್ಣ ಮಾಹಿತಿ (ಬಯೋಡಾಟಾ) ಸಲ್ಲಿಸಲಾಗಿದೆಯೇ ? | : | ಹೌದು | ಇಲ್ಲ |
| 05 | ವಾಣಿಜ್ಯ ಟೆಂಡರ್ ದರಪಟ್ಟಿಯನ್ನು ಭಾಗ–2 ರಲ್ಲಿ ಅಕ್ಷರ ಮತ್ತು ಪದಗಳನ್ನು ದರಗಳನ್ನು ನಮೂದಿಸಿದೆಯೇ | : | ಹೌದು | ಇಲ್ಲ |
| 06 | ಲಕೋಟೆಯನ್ನು ಅರಗಿನಿಂದ ಶೀಲ್ ಮಾಡಲಾಗಿದೆಯೇ ? | : | ಹೌದು | ಇಲ್ಲ |

**ಎಚ್ಚರಿಕೆ :** ನಿಗದಿಪಡಿಸಿರುವ ಇ.ಎಂ.ಡಿ. ಲಗತ್ತಿಸದಿದ್ದಲ್ಲಿ ಟೆಂಡರ್ ನಿಯಮದ ಪ್ರಕಾರ ಟೆಂಡರ್ ಅರ್ಜಿ ರದ್ದಾಗುತ್ತದೆ.

ಟೆಂಡರ್‌ದಾರರ ಸಹಿ ಮತ್ತು ಮೊಹರು

ದಿನಾಂಕ :

**ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿಯಮಿತ**

**ಮಾಚೇನಹಳ್ಳಿ ನಿದಿಗೆ ಅಂಚೆ ಶಿವಮೊಗ್ಗ – 577 222. ದೂರವಾಣಿ : (08182) 246344**

## ವಾಣಿಜ್ಯ ಟೆಂಡರ್

## ದ್ವೈವಾರ್ಷಿಕ ದರ ಗುತ್ತಿಗೆ

ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಒಕ್ಕೂಟದ ವ್ಯಾಪ್ತಿಯಲ್ಲಿ ಬರುವ ಈ ಕೆಳಕಂಡ ನಂದಿನಿ ಮಿಲ್ಕ್ ಪಾರ್ಲರ್‌ಗಳಲ್ಲಿ ಹಾಲು ಮತ್ತು ಹಾಲಿನ ಉತ್ಪನ್ನಗಳನ್ನು ಮಾರ್ಜಿನ್ ಆಧಾರದ ಮೇಲೆ ಮಾರಾಟ ಮಾಡಿ ಒಕ್ಕೂಟಕ್ಕೆ ಮಾಸಿಕ ಲೈಸೆನ್ಸಿ ಫೀಯನ್ನು ಮತ್ತು ಶೇ.18 ರಷ್ಟು ಜಿ.ಎಸ್.ಟಿ ಪಾವತಿಸಿ ಪಾರ್ಲರ್ ನಿರ್ವಹಣೆ ಮಾಡಲು ಇ–ಪ್ರೋಕ್ಯೂರ್‌ಮೆಂಟ್ ಪೋರ್ಟಲ್ ಮೂಲಕ (ಟೆಕ್ನಿಕಲ್ / ಕಮರ್ಷಿಯಲ್) ದರ ಹೊಂದಿದ ಎರಡು ಪ್ರತ್ಯೇಕ ಟೆಂಡರ್ ಕರೆಯಲಾಗಿದ್ದು ಅರ್ಜಿಯನ್ನು ಸಲ್ಲಿಸಬಹುದಾಗಿದೆ.

## ವಾಣಿಜ್ಯ ಟೆಂಡರ್ ಭಾಗ—2

| | | |
|---|---|---|
| 1 | ಟೆಂಡರ್ ಡೌನ್‌ಲೋಡ್ ಮಾಡಿಕೊಳ್ಳುವ ದಿನಾಂಕ | **ದಿನಾಂಕ: 24.02.2021 ರಿಂದ** |
| 2 | ಭರ್ತಿ ಮಾಡಿದ ಟೆಂಡರ್ ಫಾರಂಗಳನ್ನು ಇ–ಟೆಂಡರ್ ಮೂಲಕ ಸಲ್ಲಿಸಲು ಕೊನೆಯ ದಿನಾಂಕ | **ದಿನಾಂಕ: 24.03.2021 ರಂದು ಸಂಜೆ: 17.30 ಗಂಟೆಯವರೆಗೆ** |
| 3 | **ಭರ್ತಿ ಮಾಡಿದ ಟೆಕ್ನಿಕಲ್ ಟೆಂಡರ್ ತೆರೆಯುವ ದಿನ** | ದಿನಾಂಕ: **26.03.2021** ರಂದು ಬೆಳಿಗ್ಗೆ: **11.30** ಗಂಟೆಗೆ |
| 4 | **ಭರ್ತಿ ಮಾಡಿದ ಕಮರ್ಷಿಯಲ್ ಟೆಂಡರ್‌ಗಳನ್ನು ತೆರೆಯುವ ದಿನ** | ದಿನಾಂಕ: **29.03.2021** ರಂದು ಬೆಳಿಗ್ಗೆ: **11.30** ಗಂಟೆಗೆ |

# ವಾಣಿಜ್ಯ ಟೆಂಡರ್ ಭಾಗ – 2

## ಅರ್ಹತೆ

ತಾಂತ್ರಿಕ ಟೆಂಡರ್‌ನ ಭಾಗ –1 ರಲ್ಲಿನ ನಿಯಮಾವಳಿಗಳ ಷರತ್ತು ಮತ್ತು ನಿಬಂಧನೆಗಳನ್ನು ಸಂಪೂರ್ಣವಾಗಿ ಯಾರು ಪೂರೈಸುತ್ತಾರೋ ಅಂತಹ ಬಿಡ್ಡುದಾರರ ವಾಣಿಜ್ಯ ಟೆಂಡರ್‌ನ್ನು ಅಂಗೀಕರಿಸಿ ಅಂತಿಮವಾಗಿ ಟೆಂಡರ್ ಇತ್ಯರ್ಥ ಮಾಡಲಾಗುವುದು. ಅರ್ಹತೆ ಪಡೆಯದ ಇತರೆ ವಾಣಿಜ್ಯ ಟೆಂಡರ್‌ಗಳನ್ನು ಸಾರಾಸಗಟಾಗಿ ತಿರಸ್ಕರಿಸಲಾಗುವುದು.

ಸದರಿ ನಿಯಮಗಳ ಷರತ್ತು ಮತ್ತು ನಿಬಂಧನೆಗಳಿಗೆ ನಾನು ಬದ್ಧನಾಗಿರುತ್ತೇನೆ.

ಟೆಂಡರ್‌ದಾರರ ಸಹಿ
ಹೆಸರು
ಮತ್ತು ಮೊಹರು

ವಿಳಾಸ :

ಹೆಸರು : ............................................................

ತಂದೆಯ ಹೆಸರು : ..............................................

ವಿಳಾಸ :.............................................................

...................................................................................

....................................ಪಿನ್ ಕೋಡ್.....................

ದೂರವಾಣಿ ಸಂ: ...............................................

# ದರಪಟ್ಟಿ

**ದಿನಾಂಕ :**

**ವ್ಯವಸ್ಥಾಪಕ ನಿರ್ದೇಶಕರು**
**ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ**
**ಜಿಲ್ಲಾ ಸಹಕಾರ ಹಾಲು ಒಕ್ಕೂಟ**
**ಮಾಚೇನಹಳ್ಳಿ ನಿದಿಗೆ ಅಂಚೆ**
**ಶಿವಮೊಗ್ಗ.**
ಮಾನ್ಯರೇ,

**ಉಲ್ಲೇಖ : ಟೆಂಡರ್ ಪ್ರಕಟಣೆ ಸಂಖ್ಯೆ: ಐ.ಎಫ್.ಟಿ. ಸಂಖ್ಯೆ/ಶಿ.ದಾ.ಚಿ.ಸಹಾಒ/ ಮಾರುಕಟ್ಟೆ/ಟೆಂಡರ್/8155/2020–21 ದಿನಾಂಕ: 22.02.2021**

ಮೇಲಿನ ಉಲ್ಲೇಖದನ್ವಯ ನಾನು / ನಾವು ಮಿಲ್ಕ್ ಪಾರ್ಲರ್ ಲೈಸೆನ್ಸ್ ಪಡೆಯಲು ನನ್ನ /ನಮ್ಮ ದರಪಟ್ಟಿ ಸಲ್ಲಿಸಿರುತ್ತೇನೆ/ತ್ತೇವೆ.

| ಪಾರ್ಲರ್ ಹೆಸರು/ಸಂಖ್ಯೆ | ಟೆಂಡರ್‌ಗಾಗಿ ಸೂಚಿಸಿರುವ ಮಾಸಿಕ ಲೈಸೆನ್ಸ್ ಫೀ ದರ ರೂ. ಪೈ. |
|---|---|
| | ರೂ. ಪೈ.<br>ರೂ................................. (ಅಕ್ಷರಗಳಲ್ಲಿ).........<br>..............................................................) |

ನಾನು/ನಾವು ಮತ್ತೊಮ್ಮೆ ದೃಢೀಕರಿಸಿರುವಂತೆ ನಾನು/ನಾವು ಪಾರ್ಲರ್ ಲೈಸೆನ್ಸಿಯ ವಿವರಗಳನ್ನು ಅಭ್ಯಸಿಸಿರುತ್ತೇವೆ ಹಾಗೂ ಪಾರ್ಲರ್ ಲೈಸೆನ್ಸ್ ನಿಯಮ ನಿಬಂಧನೆಗಳನ್ನು, ವಿವರ ಮಾಹಿತಿಗಳನ್ನು ಹಾಗೂ ಇತರೆ ಅಗತ್ಯ ವಿಷಯುಗಳನ್ನು ಅರ್ಥ ಮಾಡಿಕೊಂಡಿರುತ್ತೇನೆ/ತ್ತೇವೆ. ನಾನು/ನಾವು ಪಾರ್ಲರ್ ನಿಬಂಧನೆಗಳ ರೀತಿ ನೀತಿಗಳನ್ನು ಸಂಪೂರ್ಣ ಅರಿತವನಾಗಿರುತ್ತೇನೆ. ಹಾಗೂ ಇದಕ್ಕೆ ಅನುಗುಣವಾಗಿಯೇ ದರಪಟ್ಟಿಯನ್ನು ಸಲ್ಲಿಸಿರುತ್ತೇನೆ. ಮೇಲೆ ತಿಳಿಸಿರುವ ಮಾಸಿಕ ಲೈಸೆನ್ಸ್ ಫೀ ಜೊತೆಗೆ ಶೇ. 18 ರಷ್ಟು ಜಿ.ಎಸ್.ಟಿ ಯನ್ನು ಪಾವತಿಸಲು ಒಪ್ಪಿರುತ್ತೇನೆ.

ಪಾರ್ಲರ್ ಲೈಸೆನ್ಸ್‌ಗೆ ಸಂಬಂಧಪಟ್ಟಂತೆ ನಿಯಮ ನಿಬಂಧನೆಗಳನ್ನು ಕುರಿತಾಗಿ ಉಂಟಾಗಬಹುದಾದ ಯಾವುದೇ ತಂಟೆ/ತಕರಾರಿಗೆ ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕರು ನೀಡುವ ತೀರ್ಮಾನವೇ ಅಂತಿಮ ಎನ್ನುವ ವಿಷಯಕ್ಕೆ ನಾನು/ನಾವು ಬದ್ಧರಾಗಿರುತ್ತೇನೆ/ತ್ತೇವೆ.

ಟೆಂಡರ್‌ದಾರರ ಸಹಿ
ಹೆಸರು
ತಂದೆ ಹೆಸರು

**ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ.,**

**ಮಾಚೇನಹಳ್ಳಿ, ನಿದಿಗೆ(ಅಂಚೆ), ಶಿವಮೊಗ್ಗ– 577 222, ☎ 08182–246165 www.shimul.coop**

ಐ.ಎಫ್.ಟಿ. ಸಂಖ್ಯೆ/ಶಿ.ದಾ.ಚಿ.ಸಹಾಒ/ಮಾರುಕಟ್ಟೆ/ಟೆಂಡರ್/8155/2020–21 **ದಿನಾಂಕ: 22.02.2021**

**–: *ಒಕ್ಕೂಟದ ಸ್ವಂತ ಮಿಲ್ಕ್ ಪಾರ್ಲರ್‌ಗಳನ್ನು ದ್ವೈವಾರ್ಷಿಕ ಅವಧಿಗೆ ಒಕ್ಕೂಟಕ್ಕೆ ಮಾಸಿಕ ಲೈಸೆನ್ಸಿ ಫೀ ಪಾವತಿಸಿ ಪಾರ್ಲರ್ ನಿರ್ವಹಣೆ ಮಾಡಲು ಇ–ಪ್ರೋಕ್ಯೂರ್‌ಮೆಂಟ್ ಪೋರ್ಟಲ್ ಮೂಲಕ ಟೆಂಡರ್ ಪ್ರಕಟಣೆ* :–**

ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಒಕ್ಕೂಟದ ವ್ಯಾಪ್ತಿಯಲ್ಲಿ ಬರುವ ಈ ಕೆಳಕಂಡ ನಂದಿನಿ ಮಿಲ್ಕ್ ಪಾರ್ಲರ್‌ಗಳಲ್ಲಿ ಹಾಲು ಮತ್ತು ಹಾಲಿನ ಉತ್ಪನ್ನಗಳನ್ನು ಮಾರ್ಜಿನ್ ಆಧಾರದ ಮೇಲೆ ಮಾರಾಟ ಮಾಡಿ ಒಕ್ಕೂಟಕ್ಕೆ ಮಾಸಿಕ ಲೈಸೆನ್ಸಿ ಫೀಯನ್ನು ಮತ್ತು ಶೇ.18 ರಷ್ಟು ಜಿ.ಎಸ್.ಟಿ ತೆರಿಗೆಯನ್ನು ಪಾವತಿಸಿ ಪಾರ್ಲರ್ ನಿರ್ವಹಣೆ ಮಾಡಲು ಇ–ಪ್ರೋಕ್ಯೂರ್‌ಮೆಂಟ್ ಪೋರ್ಟಲ್ ಮೂಲಕ (ಟೆಕ್ನಿಕಲ್ / ಕಮರ್ಷಿಯಲ್) ದರ ಹೊಂದಿದ ಎರಡು ಪ್ರತ್ಯೇಕ ಟೆಂಡರ್ ಕರೆಯಲಾಗಿದ್ದು ಅರ್ಜಿಯನ್ನು ಸಲ್ಲಿಸಬಹುದಾಗಿದೆ.

**https://eproc.karnataka.gov.in**

| | | |
|---|---|---|
| 1 | ಟೆಂಡರ್ ಡೌನ್‌ಲೋಡ್ ಮಾಡಿಕೊಳ್ಳುವ ದಿನಾಂಕ | ದಿನಾಂಕ: 24.02.2021 ರಿಂದ |
| 2 | ಟೆಂಡರ್ ಫಾರಂಗಳನ್ನು ಇ–ಟೆಂಡರ್ ಮೂಲಕ ಸಲ್ಲಿಸಲು ಕೊನೆಯ ದಿನಾಂಕ | ದಿನಾಂಕ: 24.03.2021 ರಂದು ಸಂಜೆ: 17.30 ಗಂಟೆಯವರೆಗೆ |
| 3 | ಟೆಕ್ನಿಕಲ್ ಟೆಂಡರ್ ತೆರೆಯುವ ದಿನ | ದಿನಾಂಕ: 26.03.2021 ರಂದು ಬೆಳಿಗ್ಗೆ: 11.30 ಗಂಟೆಗೆ |
| 4 | ಕಮರ್ಷಿಯಲ್ ಟೆಂಡರ್‌ಗಳನ್ನು ತೆರೆಯುವ ದಿನ | ದಿನಾಂಕ: 29.03.2021 ರಂದು ಬೆಳಿಗ್ಗೆ: 11.30 ಗಂಟೆಗೆ |

| ಕ್ರ. ಸಂ | ಮಿಲ್ಕ್ ಪಾರ್ಲರ್‌ಗಳ ಹೆಸರು | ಇ.ಎಂ.ಡಿ ವಿವರ | ಭದ್ರತಾ ಠೇವಣಿ |
|---|---|---|---|
| 1 | ಪಟ್ಟಣ ಪಂಚಾಯ್ತಿ ಮಿಲ್ಕ್ ಪಾರ್ಲರ್ – ತೀರ್ಥಹಳ್ಳಿ | 25,000/– | 1,00,000/– |
| 2 | ಪಟ್ಟಣ ಪಂಚಾಯ್ತಿ ಮಿಲ್ಕ್ ಪಾರ್ಲರ್ – ಶಿರಾಳಕೊಪ್ಪ | 25,000/– | 1,00,000/– |
| 3 | ಪಶು ಆಸ್ಪತ್ರೆ ಮಿಲ್ಕ್ ಪಾರ್ಲರ್ – ಹೊಸನಗರ | 25,000/– | 1,00,000/– |
| 4 | ತಡಗಣಿ ಶೀಥಲೀಕರಣ ಕೇಂದ್ರದ ಪಾರ್ಲರ್ – ತಡಗಣಿ | 25,000/– | 1,00,000/– |
| 5 | ಶಿವಕುಮಾರ್ ಸ್ವಾಮಿ ಬಡಾವಣೆ ಮಿಲ್ಕ್ ಪಾರ್ಲರ್ – ದಾವಣಗೆರೆ | 25,000/– | 1,00,000/– |
| 6 | ಮಹಿಳಾ ಮತ್ತು ಮಕ್ಕಳ ಆಸ್ಪತ್ರೆ ಮಿಲ್ಕ್ ಪಾರ್ಲರ್ – ದಾವಣಗೆರೆ. | 25,000/– | 50,000/– |

**ವಿಶೇಷ ಸೂಚನೆ:– ತೀರ್ಥಹಳ್ಳಿ ಪಟ್ಟಣ ಪಂಚಾಯ್ತಿ ಪಾರ್ಲರ್ ಟೆಂಡರ್ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಮೀಸಲಾಗಿರುತ್ತದೆ.**

**ನಿಬಂಧನೆ ಮತ್ತು ಷರತ್ತುಗಳು :–**

1. ಇ–ಪ್ರೋಕ್ಯೂರ್‌ಮೆಂಟ್ ನಿಯಾಮವಳಿ ಅಡಿ ನೊಂದಣಿ ಮಾಡಿಸಿದ ಅರ್ಜಿದಾರರು ಟೆಂಡರ್‌ಗೆ ಅರ್ಜಿ ಸಲ್ಲಿಸಬಹುದು.
2. ಕನಿಷ್ಠ ಇ.ಎಂ.ಡಿ. ರೂ. 25,000/– ಆದರೆ ಮಿಲ್ಕ್ ಪಾರ್ಲರ್‌ಗಳಿಗೆ ಅವುಗಳ ಮುಂದೆ ಸೂಚಿಸಿರುವಂತೆ ಇ.ಎಂ.ಡಿ ಬಾಬ್ತು ಡಿ.ಡಿ.ಯನ್ನು ಇ–ಪ್ರೋಕ್ಯೂರ್‌ಮೆಂಟ್ ವೇದಿಕೆಯ ನಿಯಮಾವಳಿಯಂತೆ ಸಲ್ಲಿಸುವುದು. ಕಡಿಮೆ ಇ.ಎಂ.ಡಿ ಪಾವತಿಸಿದಲ್ಲಿ ಟೆಂಡರ್‌ನ್ನು ತಿರಸ್ಕರಿಸಲಾಗುವುದು.
3. ಪ್ರತಿ ಪಾರ್ಲರ್‌ಗೆ ಪ್ರತ್ಯೇಕ ಟೆಂಡರ್ ಮತ್ತು ಇ.ಎಂ.ಡಿ ಸಲ್ಲಿಸುವುದು. ಪ್ರತಿ ಪಾರ್ಲರ್‌ಗೆ ಪ್ರತ್ಯೇಕ ಮಾಸಿಕ ಲೈಸೆನ್ಸಿ ಫೀ ದರ ನಮೂದಿಸುವುದು. ಗರಿಷ್ಠ ದರ ನಮೂದಿಸಿದ ಟೆಂಡರ್‌ದಾರರನ್ನು ಯಶಸ್ವಿ ಟೆಂಡರ್‌ದಾರರೆಂದು ಪರಿಗಣಿಸಲಾಗುವುದು.
4. ಮಾಸಿಕ ಲೈಸೆನ್ಸಿ ಫೀ ಮತ್ತು ಶೇ.18 ರಷ್ಟು ಜಿ.ಎಸ್.ಟಿ ತೆರಿಗೆಯನ್ನು ಪ್ರತಿ ತಿಂಗಳು 5 ನೇ ತಾರೀಖಿನೊಳಗಾಗಿ ಒಕ್ಕೂಟಕ್ಕೆ ಪಾವತಿಸತಕ್ಕದ್ದು. ಜಿ.ಎಸ್.ಟಿ ತೆರಿಗೆಯು ಸರ್ಕಾರದ ಆದೇಶಾನುಸಾರ ಕಾಲಕಾಲಕ್ಕೆ ಬದಲಾವಣೆಗೆ ಒಳಪಟ್ಟಿರುತ್ತದೆ.

ಮುಂದುವರೆದಿದೆ

5. ಲೈಸೆನ್ಸಿದಾರರು ಮಿಲ್ಕ್ ಪಾರ್ಲರ್ ಲೈಸೆನ್ಸಿ ಆದೇಶ ಪಡೆದ 1 ತಿಂಗಳೊಳಗಾಗಿ ಜಿ.ಎಸ್.ಟಿ ನೋಂದಣಿ ಮಾಡಿಸಿ ಅದರ ಪ್ರತಿಯನ್ನು ಒಕ್ಕೂಟಕ್ಕೆ ಸಲ್ಲಿಸುವುದು. ತಪ್ಪಿದ್ದಲ್ಲಿ ಲೈಸೆನ್ಸಿಯನ್ನು ರದ್ದುಗೊಳಿಸಿ ಭದ್ರತಾ ಠೇವಣಿಯನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

6. ಟೆಂಡರ್ ಸ್ವೀಕೃತಿ ಆದೇಶ ಪಡೆದ ನಂತರ ಸೂಚಿತ ಅವಧಿಯೊಳಗೆ (ರೂ.200/– ಛಾಪಾ ಕಾಗದದ ಮೇಲೆ) ಕರಾರು ಒಪ್ಪಂದ ಮಾಡಿಕೊಳ್ಳುವುದು ಹಾಗೂ ನಿಗಧಿಪಡಿಸಿದ ಭದ್ರತಾ ಠೇವಣಿ ಹಣವನ್ನು ಒಕ್ಕೂಟಕ್ಕೆ ಸಂದಾಯ ಮಾಡತಕ್ಕದ್ದು. ಸೂಚಿಸಲಾಗಿರುವ ದಿನಾಂಕಗಳೊಳಗಾಗಿ ವಿಧಿ–ವಿಧಾನಗಳನ್ನು ಪೂರೈಸದಿದ್ದಲ್ಲಿ ಒಪ್ಪಿಗೆಯಾಗಿರುವ ಲೈಸೆನ್ಸಿಯನ್ನು ರದ್ದುಪಡಿಸಿ ಇ.ಎಂ.ಡಿ ಮೊತ್ತವನ್ನು ಒಕ್ಕೂಟಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

7. ಸರಬರಾಜು ಮಾಡಲಾದ ಹಾಲು ಮತ್ತು ಹಾಲಿನ ಉತ್ಪನ್ನಗಳ ಮೊಬಲಗನ್ನು ಒಕ್ಕೂಟಕ್ಕೆ/ ಒಕ್ಕೂಟವು ನಿಗಧಿಪಡಿಸಿದ ಬ್ಯಾಂಕ್‌ಗೆ/ ವಿತರಣಾ ವಾಹನದವರಿಗೆ ಅದೇ ದಿನ ನಗದು ರೂಪದಲ್ಲಿ ಸಂದಾಯ ಮಾಡತಕ್ಕದ್ದು. ಬಾಕಿ ಉಳಿಸಿಕೊಂಡಲ್ಲಿ ನಿಯಮಾನುಸಾರ ದಂಡ ವಿಧಿಸಲಾಗುವುದು ಹಾಗೂ ಹಾಲು ಮತ್ತು ಹಾಲು ಉತ್ಪನ್ನಗಳ ಮೊತ್ತವನ್ನು ಪಾವತಿಸದಿರುವುದನ್ನು ಟೆಂಡರ್ ನಿಬಂಧನೆ ಉಲ್ಲಂಘನೆ ಎಂದು ಪರಿಗಣಿಸಲಾಗುವುದು ಹಾಗೂ ಟೆಂಡರ್ ಲೈಸೆನ್ಸ್‌ನ್ನು ರದ್ದುಪಡಿಸಲು ಕ್ರಮ ಕೈಗೊಳ್ಳಲಾಗುವುದು.

8. ಒಕ್ಕೂಟವು ನಿಗಧಿಪಡಿಸಿದ ಪ್ರಮಾಣದ ಹಾಲನ್ನು ಪ್ರತಿ ದಿನ ಮಾರಾಟ ಮಾಡಬೇಕಾಗುತ್ತದೆ. ತಪ್ಪಿದ್ದಲ್ಲಿ ಲೈಸೆನ್ಸ್ ಗುತ್ತಿಗೆಯನ್ನು ರದ್ದುಪಡಿಸುವುದರ ಜೊತೆಗೆ ಲೈಸೆನ್ಸಿದಾರರು ಪಾವತಿಸಿದ ಪೂರ್ಣ ಮೊತ್ತವನ್ನು ಮುಟ್ಟುಗೋಲು ಹಾಕಿಕೊಳ್ಳುವ ಹಕ್ಕನ್ನು ವ್ಯವಸ್ಥಾಪಕ ನಿರ್ದೇಶಕರು ಹೊಂದಿರುತ್ತಾರೆ.

9. ಪಾರ್ಲರ್‌ಗಳಲ್ಲಿ ಕೆಲಸ ನಿರ್ವಹಿಸುವ ಸಿಬ್ಬಂದಿಗೆ ಇ.ಎಸ್.ಐ / ಪಿ.ಎಫ್ ಹಾಗೂ ಯಾವುದೇ ಶಾಸನಬದ್ಧ ಪಾವತಿಗಳಿದ್ದಲ್ಲಿ ಅದಕ್ಕೆ ಲೈಸೆನ್ಸಿದಾರರೇ ಜವಾಬ್ದಾರರು.

10. ಲೈಸೆನ್ಸಿದಾರರು ಯಾವುದೇ ಕಾರಣಕ್ಕೂ ಮಾರಾಟ ಮಳಿಗೆ (ಪಾರ್ಲರ್)ನ್ನು ಬೇರೆಯವರಿಗೆ ವಹಿಸಿಕೊಡುವುದನ್ನು (ಸಬ್‌ಲೀಜ್) ನಿಷೇಧಿಸಿದೆ. ಆದಾಗ್ಯೂ, ಅನಿವಾರ್ಯ ಸಂದರ್ಭದಲ್ಲಿ ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕರವರ ಪೂರ್ವಾನುಮತಿಯೊಂದಿಗೆ ವಿಧಿವಿಧಾನಗಳನ್ನು ಅನುಸರಿಸಿ ನಿಗಧಿತ ವರ್ಗಾವಣೆ ಶುಲ್ಕ ರೂ.10,000–00ನ್ನು ಒಕ್ಕೂಟಕ್ಕೆ ಪಾವತಿಸಿ ಲೈಸೆನ್ಸಿಯನ್ನು ವರ್ಗಾಯಿಸಿಕೊಳ್ಳಬಹುದಾಗಿರುತ್ತದೆ.

11. ಲೈಸೆನ್ಸಿದಾರರು ಹಾಲು ಮತ್ತು ಹಾಲು ಉತ್ಪನ್ನಗಳನ್ನು ಮಾರಾಟ ಮಾಡಲು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ 2006 ಮತ್ತು ನಿಯಮಗಳು 2011 ರ ಪ್ರಕಾರ ಜಿಲ್ಲಾಮಟ್ಟದ ಸರ್ವೇಕ್ಷಣಾಧಿಕಾರಿ ಅಥವಾ ತಾಲ್ಲೂಕು ಮಟ್ಟದಲ್ಲಿ ಆಹಾರ ಸುರಕ್ಷತಾಧಿಕಾರಿ(ಫುಡ್ ಸೇಫ್ಟಿ ಆಫೀಸರ್) ರವರಿಂದ ಅಧಿಕೃತ ಲೈಸೆನ್ಸ್ ನ್ನು ಪಡೆಯಬೇಕು ಹಾಗೂ ನಗರ ಸಭೆ, ನಗರ ಪಾಲಿಕೆ, ಪುರಸಭೆ ಇನ್ನಿತರ ಪ್ರಾಧಿಕರದಿಂದ ಹಾಲಿನ ಪಾರ್ಲರ್ ನಡೆಸಲು ಲೈಸೆನ್ಸಿ ಪಡೆಯತಕ್ಕದ್ದು. ಹಾಗೂ ವೃತ್ತಿ ತೆರಿಗೆ ಲೈಸೆನ್ಸ್‌ನ್ನು ಪಡೆಯತಕ್ಕದ್ದು ಹಾಗೂ ಅವರ ಲೈಸೆನ್ಸಿ ಅವಧಿಗನುಗುಣವಾಗಿ ನವೀಕರಣ ಮಾಡಿಸಿಕೊಳ್ಳತಕ್ಕದ್ದು.

12. ಲೈಸೆನ್ಸಿದಾರರು ಮಾರಾಟ ಮಳಿಗೆ ಹಾಗೂ ತಮಗೆ ಒದಗಿಸಿರುವ ವಸ್ತುಗಳನ್ನು ಉತ್ತಮ ಸ್ಥಿತಿಯಲ್ಲಿ (ಗುತ್ತಿಗೆ: ಲೈಸೆನ್ಸಿ ಪಡೆಯುವ ಸಂದರ್ಭದಲ್ಲಿ ಇದ್ದಂತೆ) ತಮ್ಮ ಗುತ್ತಿಗೆ ಲೈಸೆನ್ಸ್ ಅವಧಿ ಪೂರ್ಣಗೊಂಡ ನಂತರ ಒಕ್ಕೂಟಕ್ಕೆ ಹಿಂದಿರುಗಿಸಬೇಕು. ಮಳಿಗೆ/ ಯಂತ್ರೋಪಕರಣಗಳಿಗೆ ಯಾವುದೇ ರೀತಿಯಲ್ಲಿ ಹಾನಿಯಾಗಿದ್ದಲ್ಲಿ ತತ್ಸಬಂಧ ಮೊತ್ತವನ್ನು ಗುತ್ತಿಗೆದಾರರ ಭದ್ರತಾ ಠೇವಣಿ ಹಣದಿಂದ ಕಠಾಯಿಸಿಕೊಳ್ಳುವ ಅಧಿಕಾರವನ್ನು ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕರು ಹೊಂದಿರುತ್ತಾರೆ. ಇಂತಹ ಹಾನಿಯ ಮೊತ್ತವು ಹಾಗೂ ಹಾಲು ಮತ್ತು ಹಾಲು ಉತ್ಪನ್ನಗಳ ಮಾರಾಟದ ಬಾಕಿಯ ಮೊತ್ತವು ಲೈಸೆನ್ಸಿದಾರರ ಭದ್ರತಾ ಠೇವಣಿ ಮೊತ್ತಕ್ಕಿಂತ ಹೆಚ್ಚಾಗಿದ್ದಲ್ಲಿ ಅಂತಹ ಮೊತ್ತವನ್ನು ಲೈಸೆನ್ಸಿದಾರರ ಚರಸ್ಥಿರ ಆಸ್ತಿಗಳಿಂದ ವಸೂಲಿ ಮಾಡಿಕೊಳ್ಳುವ ಹಕ್ಕನ್ನು ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಒಕ್ಕೂಟವು ಹೊಂದಿರುತ್ತದೆ.

ಮುಂದುವರೆದಿದೆ________

13. ಒಕ್ಕೂಟದ ಆಸ್ತಿಗೆ ಬೆಂಕಿ, ಕಳ್ಳತನ, ದರೋಡೆ ಮತ್ತು ಲೂಟಿ ಇತ್ಯಾದಿಗಳಿಗೆ ಸಂಬಂಧಿಸಿದಂತೆ ಲೈಸೆನ್ಸಿದಾರರು ತಮ್ಮ ಸ್ವಂತ ಖರ್ಚಿನಲ್ಲಿ ಒಕ್ಕೂಟದ ಹೆಸರಿಗೆ ವಿಮೆ ಮಾಡಿಸತಕ್ಕದ್ದು.

14. ಗರಿಷ್ಠ ದರ ನಮೂದಿಸಿದ ಟೆಂಡರ್‌ದಾರರೊಂದಿಗೆ ಮಾತ್ರ ದರ ನಿಷ್ಕರ್ಶೆ ನಡೆಸಲಾಗುವುದು.

15. ಮಳಿಗೆಯ ವಿದ್ಯುಚ್ಛಕ್ತಿ ವೆಚ್ಚ, ನಗರಸಭೆ / ಪುರಸಭೆ ನೀರಿನ ದರ, ಇನ್ನಿತರ ತೆರಿಗೆಗಳನ್ನು ಲೈಸೆನ್ಸಿದಾರರೇ ಪಾವತಿಸುವುದು.

**ಯಾವುದೇ ಕಾರಣ ನೀಡದೆ ಟೆಂಡರನ್ನು ಅಂಗಿಕರಿಸುವ /ತಿರಸ್ಕರಿಸುವ ಹಕ್ಕನ್ನು ವ್ಯವಸ್ಥಾಪಕ ನಿರ್ದೇಶಕರು ಹೊಂದಿರುತ್ತಾರೆ. ವ್ಯವಸ್ಥಾಪಕ ನಿರ್ದೇಶಕರ ತೀರ್ಮಾನವೆ ಅಂತಿಮವಾದುದು.**

**ಹೆಚ್ಚಿನ ಮಾಹಿತಿಗಾಗಿ ಕಚೇರಿ ವೇಳೆಯಲ್ಲಿ ಮಾರುಕಟ್ಟೆ ವಿಭಾಗವನ್ನು ಮತ್ತು ಒಕ್ಕೂಟದ ವೆಬ್‌ಸೈಟ್ – www.shimul.coop ಸಂಪರ್ಕಿಸಬಹುದು.**

**ಸಹಿ/–**

**ವ್ಯವಸ್ಥಾಪಕ ನಿರ್ದೇಶಕರು**

ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ
ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿ.,

ದಿನಾಂಕ : 22.02.2021
ಸ್ಥಳ : ಮಾಚೇನಹಳ್ಳಿ